# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 247 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 20–04–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 247 | Title- Code: KARKAN 28269 | Chitradurga | Date: 20-04-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು
ದಲಿತರ ಸಮಾಧಿ ಮೇಲೆ ಸಿದ್ದು ಆಡಳಿತ: ಛಲವಾದಿ ನಾರಾಯಣಸ್ವಾಮಿ ಆರೋಪ 2
ಅಗತ್ಯ ಸೇವೆಗಳ 99 ಮತದಾರರಿಂದ ಮತ ಚಲಾವಣೆ 3
ರಾಜ್ಯದಲ್ಲಿ ಮಳೆ ಇಲ್ಲದೆ ಬರ; ಅಭಿವೃದ್ಧಿಗೂ ಬರ; ಎಚ್‌ಡಿಕೆ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಏ.26ರಂದು ಮತದಾನ : ಪತಿಬಂಧಕಾಜ್ಞೆ ಜಾರಿ

» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಏ.26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ ಜರುಗಲಿದೆ. ಮತದಾರರಿಗೆ ಬೆದರಿಕೆ, ಆಸೆ ಆಮಿಷ ಒಡ್ಡುವುದನ್ನು ತಡೆಯಲು ಏಪ್ರಿಲ್ 24 ರಂದು ಸಂಜೆ 6 ಗಂಟೆಯಿಂದ ಏಪ್ರಿಲ್ 26 ರಂದು ಮತದಾನ ಮುಗಿಯುವವರೆಗೆ ಜಿಲ್ಲೆಯಾದ್ಯಂತ ಸಿಆರ್‌ಪಿಸಿ 144 ಸೆಕ್ಷನ್ ಜಾರಿ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಮತದಾನ ಕೊನೆಗೊಳ್ಳುವ 48 ಗಂಟೆಗಳ ಮುನ್ನವೇ ಬಹಿರಂಗ ಪ್ರಚಾರ ಅಂತ್ಯಗೊಳ್ಳಲಿದೆ. ನಂತರ ಅಭ್ಯರ್ಥಿಗಳು ಮನೆ ಮನೆ ಪ್ರಚಾರ ಕೈಗೊಳ್ಳಬಹುದು. ಕಾನೂನು ಸುವ್ಯವಸ್ಥೆಗೆ ಭಂಗ ತರುವ ಯಾವುದೇ ಕಾರ್ಯಗಳನ್ನು ಯಾರು ಕೂಡ ಮಾಡುವಂತಿಲ್ಲ. 5 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರುವಂತಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

### ಪ್ರತಿಷ್ಠಿತ ಶಾಲೆ ದಾಖಲಾತಿಗೆ ವಿದ್ಯಾರ್ಥಿಗಳ ಆಯ್ಕೆಗೆ ಅರ್ಜಿ ಅಹ್ವಾನ

» ಚಿತ್ರದುರ್ಗ

ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ(ಎಸ್.ಟಿ.) ಪ್ರತಿಭಾವಂತ ವಿದ್ಯಾರ್ಥಿಗಳನ್ನು, ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ 6ನೇ ತರಗತಿಗೆ ದಾಖಲಿಸಲು, ಪರಿಶಿಷ್ಟ ವರ್ಗಗಳ ಇಲಾಖೆ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ.9 ರಿಂದ ಅರ್ಜಿ ಸಲ್ಲಿಕೆ ಆರಂಭವಾಗಲಿದೆ. ಮೇ 21 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. 5ನೇ ತರಗತಿಯಲ್ಲಿ ಶೇ. 60 ಕ್ಕಿಂತ ಹೆಚ್ಚು ಅಂಕಗಳಿಸಿರುವ, ವಾರ್ಷಿಕವಾಗಿ, ಕುಟುಂಬದ ವರಮಾನ ರೂ.2.00 ಲಕ್ಷ ಇರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಧೃಡೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆಗೆ ಕಡ್ಡಾಯವಾಗಿ ಲಗತ್ತಿಸಬೇಕು. ಮುಖ್ಯೋಪಾಧ್ಯಯರು ಕಡ್ಡಾಯವಾಗಿ ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಆಯ್ಕೆ ಪರಿಗಣಿಸಲಾಗುವುದು. ಅಂಕಪಟ್ಟಿಯಲ್ಲಿನ ಗ್ರೇಡ್‌ಅನ್ನು ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಉಚಿತ ಅರ್ಹತಾ ಪರೀಕ್ಷಾ ಮೂಲಕ ವಿದ್ಯಾರ್ಥಿಗಳು ಆಯ್ಕೆ ಮಾಡಲಾಗುವುದು. ಪೋಷಕರು ಆಯ್ಕೆ ಮಾಡಿದ ಪ್ರತಿಷ್ಠಿತ ಶಾಲೆಗೆ ವಿದ್ಯಾರ್ಥಿಗಳನ್ನು ದಾಖಲು ಮಾಡಲಾಗುವುದು. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರದ ನಿಯಮಗಳ ಅಡಿ ಪ್ರವೇಶ ಪಡೆದ ಶಾಲೆಯು ನಿಗಧಿ ಪಡಿಸಿದ ದರದಲ್ಲಿ ನೀಡಲಾಗುವುದು. ಆಯಾ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ಚಿತ್ರದುರ್ಗ ನಗರದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಅರ್ಜಿ ಪಡೆದುಕೊಳ್ಳಬಹುದು. ಅಪೂರ್ಣಗೊಂಡ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ನಾಗೇಂದ್ರನಾಯ್ಕ್ ತಿಳಿಸಿದ್ದಾರೆ.

### ಸಿಇಟಿ ಪರೀಕ್ಷೆ ಸುಸೂತ್ರ,

» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವೃತ್ತಿಪರ ಕೋರ್ಸ್‌ಗಳಾದ ಇಂಜಿನಿಯರಿಂಗ್, ಕೃಷಿ ವಿಜ್ಞಾನ, ಪಶು ಸಂಗೋಪನೆ, ಫಾರ್ಮಸಿ, ಬಿಎಸ್ಸಿ ನರ್ಸಿಂಗ್ ಸೇರಿದಂತೆ ಇನ್ನಿತರೆ ಕೋರ್ಸ್‌ಗಳಿಗೆ 2024 ನೇ ಸಾಲಿಗೆ ಪ್ರವೇಶ ಪಡೆಯಲು ಏಪ್ರಿಲ್ 19 ರಂದು ಸಿಇಟಿ ಪರೀಕ್ಷೆ ಸುಸೂತ್ರವಾಗಿ ನಡೆದಿದೆ. ಬೆಳಗಿನ ಅವಧಿಯಲ್ಲಿ ನಡೆದ ಭೌತಶಾಸ್ತ್ರ ವಿಷಯದ ಪರೀಕ್ಷೆಗೆ 218 ಹಾಗೂ ಮಧ್ಯಾಹ್ನ ನಡೆದ ರಸಾಯನಶಾಸ್ತ್ರ ಪರೀಕ್ಷೆಗೆ 223 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು.

# ಮತದಾನ ಜಾಗೃತಿಗಾಗಿ ಮ್ಯಾರಥಾನ್‌ಗೆ ಚಾಲನೆ





» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಇದೇ ಏಪ್ರಿಲ್ 26ರಂದು ಮತದಾನ ನಡೆಯಲಿದ್ದು, ಜಿಲ್ಲೆಯ ಎಲ್ಲ ಮತದಾರರು ತಪ್ಪದೇ ತಮ್ಮ ಮತಗಟ್ಟೆಗೆ ತೆರಳಿ ಮತ ಚಲಾಯಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ ಹೇಳಿದರು.

ನಗರದ ಒನಕೆ ಓಬವ್ವ ಕ್ರೀಡಾಂಗಣದ ಸಮೀಪ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಮತದಾನ ಜಾಗೃತಿಗಾಗಿ ಮ್ಯಾರಥಾನ್ ಓಟಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾರರಲ್ಲಿ ಜಾಗೃತಿ ಮೂಡಿಸಲು ಹಾಗೂ ಮತದಾನ ಪ್ರಮಾಣ ಹೆಚ್ಚಳ ಮಾಡುವ ನಿಟ್ಟಿನಲ್ಲಿ



ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದ ಅವರು, ಚುನಾವಣೆ ಪ್ರಜಾಪ್ರಭುತ್ವದ ಹಬ್ಬವಿದ್ದಂತೆ. ಎಲ್ಲ ಮತದಾರರು ಚುನಾವಣೆಯಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತವಾಗಿ ಮತದಾನ ಮಾಡಿ ಪ್ರಜಾಪ್ರಭುತ್ವ ಸದೃಢಗೊಳಿಸಬೇಕು ಎಂದು ಹೇಳಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಚಂದ್ರಕಾಂತ ನಾಗಸಮುದ್ರ ಮಾತನಾಡಿ, ಮತದಾನ ನಮ್ಮೆಲ್ಲರ ಕರ್ತವ್ಯ. ಸುಭದ್ರ ದೇಶಕ್ಕೆ ಎಲ್ಲರೂ ಮತದಾನ ಮಾಡುವುದು ಅತ್ಯಾವಶ್ಯಕ. ನೀವೂ ಮತದಾನ ಮಾಡಿ ಹಾಗೂ ಇತರರನ್ನೂ ಮತದಾನ ಮಾಡಲು ಪ್ರೇರೇಪಿಸಿ ಎಂದು ಕರೆ ನೀಡಿದರು.

ಮತದಾನ ಜಾಗೃತಿ ಮೂಡಿಸುವ ಸಲುವಾಗಿ ಹಮ್ಮಿಕೊಂಡಿದ್ದ ಮ್ಯಾರಥಾನ್ ಓಟದ ಸ್ಪರ್ಧೆಯು ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣದಿಂದ ಪ್ರಾರಂಭವಾಗಿ ಪಾರ್ಕ್ ರೋಡ್, ಜೋಗಿಮಟ್ಟಿ ರಸ್ತೆ, ರಂಗಯ್ಯನಬಾಗಿಲು, ಉಚ್ಚಂಗಿ ಯಲ್ಲಮ್ಮ ದೇವಸ್ಥಾನ, ಆನೆ ಬಾಗಿಲು, ಮಹಾತ್ಮ ಗಾಂಧಿ ವೃತ್ತ, ಬಿ.ಡಿ. ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಮದಕರಿ ವೃತ್ತ, ಎಲ್‌ಐಸಿ ಮುಂಭಾಗ, ಸ್ಟೇಡಿಯಂ ರಸ್ತೆ ಮೂಲಕ ಒನಕೆ ಓಬವ್ವ ಕ್ರೀಡಾಂಗಣದವರೆಗೆ ನಡೆಯಿತು.

ಮ್ಯಾರಥಾನ್ ಮುಕ್ತಾಯ ಹಂತವಾದ ಒನಕೆಓಬವ್ವಕ್ರೀಡಾಂಗಣದಲ್ಲಿಮ್ಯಾರಥಾನ್ ಸ್ಪರ್ಧೆಯಲ್ಲಿ ವಿಜೇತರಾದ ಮಹಿಳಾ ವಿಭಾಗದಲ್ಲಿ ಆರು ಜನರಿಗೆ ಹಾಗೂ ಪುರುಷರ ವಿಭಾಗದಲ್ಲಿ ಆರು ಜನರಿಗೆ ಬಹುಮಾನ, ಪ್ರಶಸ್ತಿ ವಿತರಿಸಲಾಯಿತು. ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರ ನೀಡಲಾಯಿತು.ಇದೇ ಸಂದರ್ಭದಲ್ಲಿ ಮ್ಯಾರಥಾನ್ ಓಟದಲ್ಲಿ ಭಾಗವಹಿಸಿದ ಸ್ಪರ್ಧಿಗಳಿಗೆ ಹಾಗೂ ಸಾರ್ವಜನಿಕರಿಗೆ ಆರೋಗ್ಯಕರ ಪಾನಿಯವಾದ ಹುಣಸೆ ಹಣ್ಣು, ಬೆಲ್ಲ, ಜೀರಿಗೆ, ಕಾಳುಮೆಣಸು ಸೇರಿಸಿ ತಯಾರಿಸಿದ ಚಿಂಚಾ ಪಾನಕ ವಿತರಿಸಲಾಯಿತು. ಈ ಪಾನಕವು ದೇಹದ ಉಷ್ಣತೆ ಕಡಿಮೆ ಮಾಡಿ ಶ್ರಮ ತಗ್ಗಿಸುತ್ತದೆ. ಆದ ಕಾರಣ ಸಾರ್ವಜನಿಕರು ಇದನ್ನು ಬಳಸಬೇಕೆಂದು ಹಾಗೂ ಸಾರ್ವಜನಿಕರಿಗೆ ಇದರ ತಯಾರಿಕಾ ವಿಧಾನದ ಕರಪತ್ರವನ್ನೂ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಆಯುಷ್ ವೈದ್ಯಾಧಿಕಾರಿ ಡಾ.ಶಿವಕುಮಾರ್, ಸ್ವೀಪ್ ಸಮಿತಿ ಜಿಲ್ಲಾ ಸಂಯೋಜಕಿ ಸುಷ್ಮಾ ರಾಣಿ ಸೇರಿದಂತೆ ಜಿಲ್ಲೆಯ ಕ್ರೀಡಾಪಟುಗಳು, ಯುವಕ–ಯುವತಿಯರು, ಸ್ವಯಂ ಸೇವಾ ಸಂಸ್ಥೆಯ ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ವಿವಿಧ ಇಲಾಖೆಯ ಸಿಬ್ಬಂದಿ ವರ್ಗದವರು ಇದ್ದರು.

# ಕೊಬ್ಬರಿ ಖರೀದಿ ನಿಯಮಾವಳಿ ಸರಳೀಕರಿಸಿ

» ಚಿತ್ರದುರ್ಗ

ಕೊಬ್ಬರಿ ಖರೀದಿಯ ನಿಯಮಾವಳಿ ಸರಳೀಕರಿಸಬೇಕೆಂದು ಒತ್ತಾಯಿಸಿ ರಾಜ್ಯ ರೈತ ಸಂಘ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದೆ.ಹೊಸದುರ್ಗದಲ್ಲಿ ಕೊಬ್ಬರಿ ಖರೀದಿ ಕೇಂದ್ರವನ್ನು ನಿಲ್ಲಿಸಲಾಗಿದೆ. ಅಲ್ಲದೆ ಈಗಾಗಲೆ ಖರೀದಿಯಾಗಿರುವ ಕೊಬ್ಬರಿಯಲ್ಲಿ 75 ಎಮ್. ಎಮ್. ಗಿಂತ ಕಡಿಮೆ ಗಾತ್ರವಿದೆ ಎಂಬ ಕಾರಣಕ್ಕೆ ಹೊಸದುರ್ಗದಲ್ಲಿ ಖರೀದಿಯಾದ ಕೊಬ್ಬರಿಯಲ್ಲಿ ಮೂರು ಲೋಡು ಲಾರಿ ಕೊಬ್ಬರಿಯನ್ನು ರವಾನೆ ಮಾಡದೆ ನಿಲ್ಲಿಸಿರುತ್ತಾರೆ ಇತ್ತೀಚೆಗಿನ ವಾತಾವರಣದ ಏರುಪೇರಿನ ಕಾರಣದಿಂದಾಗಿ ಕೊಬ್ಬರಿಯ ಗಾತ್ರದಲ್ಲಿ ವ್ಯತ್ಯಾಸವಾಗಿದೆ. ಈಗ ಹಾಲಿ ಇರುವ ನಿಯಾಮಾವಳಿಗಳ ಪ್ರಕಾರ ರೈತರ ಶೇಕಡ 50% ರಷ್ಟನ್ನು ಸಹ ರೈತರು ಮಾರಲಾಗುವುದಿಲ್ಲ.

ಪುಟ ↘ 2



# ಬಿಜೆಪಿಗೆ ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿ: ಸುರ್ಜೆವಾಲಾ ಕರೆ



» ಚಿತ್ರದುರ್ಗ

ಕೇಂದ್ರ ಸರ್ಕಾರ ಕರ್ನಾಟಕ ರಾಜವ್ಯ ಸರ್ಕಾರಕ್ಕೆ ಯಾವುದೇ ರೀತಿಯ ಸಹಾಯವನ್ನು ಮಾಡದೇ ಎಲ್ಲದಕ್ಕೂ ಸಹಾ ಚೆಂಬುನ್ನು ನೀಡಿದೆ ಇದಕ್ಕೆ ತಕ್ಕ ಪಾಠವನ್ನು ಈ ಚುನಾವಣೆಯಲ್ಲಿ ಕಲಿಸಬೇಕಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೆವಾಲಾ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಪುಟ ↘ 2

## ಪ್ರಮುಖ ಸುದ್ದಿ

# ಎನ್‌ಡಿಎ ಅಭ್ಯರ್ಥಿ ಪರ ಬಿ.ಕಾಂತರಾಜ್ ಮತಯಾಚನೆ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಅತಿ ಹೆಚ್ಚು ಮತಗಳ ಅಂತರಿಂದ ಗೆಲ್ಲಿಸುವುದು ನಮ್ಮ ಗುರಿ ಎಂದು ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಕೋಟೆ ರಸ್ತೆಯಲ್ಲಿನ ಕಾಳಮ್ಮ ದೇವಾಲಯದಲ್ಲಿ ಲೋಕಸಭಾ ಚುನಾವಣೆಯ ಹಿನ್ನಲೆಯಲ್ಲಿ ಅಮ್ಮನವರಿಗೆ ಪೂಜೆಯನ್ನು ಸಲ್ಲಿಸಿ ಪ್ರಚಾರ ಕಾರ್ಯವನ್ನು ಆರಂಭಿಸಿ ನಂತರ ಮಾತನಾಡಿದರು.



ರಾಜ್ಯ ಮಟ್ಟದಲ್ಲಿ ನಮ್ಮ ನಾಯಕರಾದ ರಾಷ್ಟ್ರೀಯ ನಾಯಕರಾದ ದೇವೇಗೌಡರವರು ಮತ್ತು ರಾಜ್ಯ ನಾಯಕರಾದ ಕುಮಾರಸ್ವಾಮಿಯವರು ಬಿಜೆಪಿಯ ಜೊತೆಯಲ್ಲಿ ಹೊಂದಾಣಿಕೆಯನ್ನು ಮಾಡಿಕೊಂಡಿದ್ದಾರೆ ಈ ಹಿನ್ನಲೆಯಲ್ಲಿ ನಮ್ಮ ಪಕ್ಷ ಚಿತ್ರದುರ್ಗದಲ್ಲಿ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳರವರ ಪರವಾಗಿ ಪ್ರಚಾರವನ್ನು ಮಾಡುವುದಲ್ಲದೆ ಅವರ ಗೆಲುವಿಗಾಗಿ ಶ್ರಮ ಹಾಕಲಿದೆ ಎಂದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ 8 ಕ್ಷೇತ್ರಗಳಿದ್ದು ಇದರಲ್ಲಿ 7 ಕ್ಷೇತ್ರದಲ್ಲಿ ಕಾಂಗ್ರೆಸ್ ಶಾಸಕರಿದ್ದರು ಸಹಾ ಬಿಜೆಪಿಯೊಂದಿಗೆ ನಮ್ಮ ಪಕ್ಷ ಸಾಥ್ ನೀಡಲಿದೆ ಎಂಟು ಕ್ಷೇತ್ರದಲ್ಲಿಯೂ ಸಹಾ ಜೆಡಿಎಸ್ ಮುಖಂಡರು, ಹಾಗೂ ಕಾರ್ಯಕರ್ತರು ಬಿಜೆಪಿ ಗೆಲುವಿಗೆ ತಮ್ಮ ಶ್ರಮವನ್ನು ಹಾಕಲಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಚಿತ್ರದುರ್ಗದ ಬಿಜೆಪಿ ಅಭ್ಯರ್ಥಿ ಹೆಚ್ಚಿನ ಮತಗಳ ಅಂತರದಿಂದ ಗೆಲುವನ್ನು ಸಾಧಿಸಲಿದ್ದಾರೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದ್ದರೂ ಸಹಾ ಮತದಾರ ಕೇಂದ್ರದಲ್ಲಿ ಮೋದಿಯವರೇ ಇರಬೇಕು ಎಂದು ಆಸೆಯನ್ನು ಪಟ್ಟಿದ್ದಾರೆ ಕಳೆದ ಎರಡು ಬಾರಿ ಮೋದಿಯವರು ಪ್ರಧಾನ ಮಂತ್ರಿಯಾಗಿ ಹಲವಾರು ಅಭೀವೃದ್ಧಿ ಕಾರ್ಯವನ್ನು ಮಾಡಿದ್ದಾರೆ ಮುಂದೆ ಇವರೇ ಪ್ರಧಾನ ಮಂತ್ರಿಯಾದರೆ ದೇಶ ಮತ್ತಷ್ಟು ಅಭೀವೃದ್ಧಿ ಹೊಂದಲಿದೆ ಎಂಬ ನಂಬಿಕೆ ಇದೆ. ಈ ಹಿನ್ನಲೆಯಲ್ಲಿ ಮತದಾರ ಕೇಂದ್ರದಲ್ಲಿ ಮೋದಿಯನ್ನು ಪ್ರಧಾನ ಮಂತ್ರಿಯಾಗಿ ನೋಡಲು ಬಯಸಿದ್ದರಿಂದ ಚಿತ್ರದುರ್ಗದಲ್ಲಿ ಬಿಜೆಪಿ ಅಭ್ಯರ್ಥಿ ಅತಿ ಹೆಚ್ಚಿನ ಮತಗಳ ಅಂತರದಿಂದ ಗೆಲುವು ಸಾಧ್ಯವಾಗಲಿದೆ ಎಂದು ಭವಿಷ್ಯ ನುಡಿದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯರಾದ ವೆಂಕಟೇಶ್, ತಿಪ್ಪಮ್ಮ ವೆಂಕಟೇಶ್, ಶಶಿಧರ್, ಭಾಸ್ಕರ್, ಹರೀಶ್, ತಾರಕೇಶ್ವರಿ, ಭಾಗ್ಯಮ್ಮ, ವಿರೇಶ್, ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯ್ಕ್, ತಾಲ್ಲೂಕು ಅಧ್ಯಕ್ಷ ತಿಮ್ಮಣ್ಣ, ಮಂಜುನಾಥ್, ಬಿಜೆಪಿಯ ತಿಪ್ಪೇಸ್ವಾಮಿ, ನಗರಸಭೆ ಮಾಜಿ ಸದಸ್ಯ ಲಿಂಗರಾಜು ಸೇರಿದಂತೆ ಇತರರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ನಗರಸಭೆಯ 1 ರಿಂದ 5 ನೇ ವಾರ್ಡ್‌ವರೆಗೆ ಬಿಜೆಪಿಮತ್ತುಜೆಡಿಎಸ್‌ಪಕ್ಷದಮುಖಂಡರು ಕಾರ್ಯಕರ್ತರು ಎನ್.ಡಿ.ಎ.ಅಭ್ಯರ್ಥಿ ಗೋವಿಂದ ಕಾರಜೋಳ ರವರ ಪರವಾಗಿ ಮತಯಾಚನೆಯನ್ನು ಮಾಡಿದರು.

## ಫಾಸ್ಟ್ ನ್ಯೂಸ್

### ಕೊಬ್ಬರಿ ಖರೀದಿ ನಿಯಮಾವಳಿ ಸರಳೀಕರಿಸಿ

» ಮೊದಲ ಪುಟದಿಂದ

ಅಲ್ಲದೆ ಕೊಬ್ಬರಿ ಆಹಾರೋತ್ಪನ್ನವಾಗಿರುವುದರಿಂದ ಗುಣಮಟ್ಟವನ್ನು ಗಣನೆಗೆ ತಗೆದುಕೊಳ್ಳಬೇಕೇ ಹೊರತು ಗಾತ್ರವನ್ನಲ್ಲ ಆ ಕಾರಣ ಈಗ ಹಾಲಿ ರೈತರು ಕೊಬ್ಬರಿಯನ್ನು ಮಾರಲು ಸಿದ್ದತೆ ನಡೆಸಿದ್ದಾರೆ ಎಂದು ತಿಳಿಸಿದರು.ಪ್ರತಿವರ್ಷಕ್ಕಿಂತ ಈ ವರ್ಷ 5000 ಟನ್ನು ಕೊಬ್ಬರಿಯನ್ನು ಕಡಿಮೆ ಖರೀದಿ ಮಾಡಲು ತೀರ್ಮಾನಿಸಿರುತ್ತಾರೆ. ಹಾಗೂ ಇನ್ನಿತರೆ ವಿಚಾರಗಳು ಖರೀದಿಗೆ ನಮ್ಮ ಜಿಲ್ಲೆಯಲ್ಲಿ ಮತ್ತು ತೂಕಕ್ಕೆ ಸಂಬಂಧಿಸಿದಂತೆ ಸರಳೀಕರಣ ಮಾಡಬೇಕೆಂದು ಒತ್ತಾಯಿಸಿ ರೈತರು 22 ರಂದು ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆಗೆ ಸಜ್ಜಾಗಿಸಿದ್ದಾರೆ. ಈ ಸಂದರ್ಭದಲ್ಲಿ ನಾಫೆಡ್ ನ ಉನ್ನತ ಅಧಿಕಾರಿಗಳು ತಮ್ಮ ಕಚೇರಿಯ ಮುಂದೆ ಹಾಜರಿರಬೇಕೆಂದು ಕೋರುತ್ತೇವೆ. ಒಂದು ವೇಳೆ ದಿನಾಂಕ 22 ರಂದು ಇತ್ಯಾರ್ಥವಾಗದಿದ್ದಲ್ಲಿ 23 ರಿಂದ ಹೊಸದುರ್ಗ ತಾಲ್ಲೂಕು ಕಛೇರಿ ಮುಂದೆ ಅನಿರ್ದಿಷ್ಟ ಚಳುವಳಿಯನ್ನು ಮಾಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಜಿಲ್ಲಾಧ್ಯಕ್ಷರು ಡಿಎಸ್‌ಹಳ್ಳಿ ಮಲ್ಲಿಕಾರ್ಜುನ, ಜಿಲ್ಲಾ ಕಾರ್ಯದರ್ಶಿ ಬೈಲಪ್ಪ, ಜಿಲ್ಲಾ ಉಪಾಧ್ಯಕ್ಷ ಮುರಿಗೇಂದ್ರಪ್ಪ, ಶಿವಕುಮಾರ್ ಕಾರ್ಯದರ್ಶಿ ಕರಿಬಸಪ್ಪ, ರಮೇಶ್ ಪಾಲ್ಗೊಂಡಿದ್ದರು.

### ದಾವಣಗೆರೆ ಲೋಕಸಭಾ ಚುನಾವಣೆ ಕೊನೆದಿನ 20 ನಾಮಪತ್ರ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ನಾಮಪತ್ರ ಸಲ್ಲಿಕೆಗೆ ಕೊನೆ ದಿನವಾದ ಏಪ್ರಿಲ್ 19 ರಂದು 14 ಅಭ್ಯರ್ಥಿಗಳಿಂದ 20 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ನಾಮಪತ್ರ ಸಲ್ಲಿಸಿದವರ ವಿವರ; ಬಿಜೆಪಿಯಿಂದ ಜಿ.ಎಸ್.ಗಾಯಿತ್ರಿ 3 ನಾಮಪತ್ರ, ಜಿ.ಎಂ.ಸಿದ್ದೇಶ್ವರ ಬಿಜೆಪಿ 3 ನಾಮಪತ್ರ, ದೊಡ್ಡೇಶಿ ಹೆಚ್.ಎಸ್ ಜನಹಿತ ಪಕ್ಷ, ತಿಪ್ಪೇಸ್ವಾಮಿ ಕೆ.ಎ ಸೋಷಿಯಲ್ ಯುನಿಟಿ ಸೆಂಟರ್ ಆಫ್ ಇಂಡಿಯಾ ಪಕ್ಷದಿಂದ 2 ನಾಮಪತ್ರ, ಶ್ರೀನಿವಾಸ್ ಎಂ.ಸಿ. ಭಾರತೀಯ ಪ್ರಜೆಗಳ ಕಲ್ಯಾಣ ಪಕ್ಷ, ಕೆಆರ್‌ಎಸ್ ಪಕ್ಷದಿಂದ ಕೆ.ಎಸ್.ವೀರಭದ್ರಪ್ಪ ಉಳಿದಂತೆ ಎಲ್ಲಾ ಪಕ್ಷೇತರರಾಗಿದ್ದು ವಿನಯ್‌ಕುಮಾರ್ ಜಿ.ಬಿ ಎರಡು ನಾಮಪತ್ರ, ಪೆದ್ದಪ್ಪ ಎಸ್, ಇರ್ಫಾನುಲ್ಲಾ, ಪ್ರಸನ್ನ ಬಿ.ಆರ್, ಮೆಹಬೂಬ ಪಾಷ, ಬರ್ಕತ್ ಅಲಿಭಾಷ, ಗಾಯಿತ್ರಿ ಜಿ.ಎಂ.ಕೋಂ ಸಿದ್ದೇಶಿ, ಕರಣಂ ಕೊಟ್ರಪ್ಪ ನಾಮಪತ್ರ ಸಲ್ಲಿಸಿದವರು. ಇದುವರೆಗೆ ಒಟ್ಟು 40 ಅಭ್ಯರ್ಥಿಗಳಿಂದ 54 ನಾಮಪತ್ರಗಳು ಸಲ್ಲಿಕೆಯಾಗಿವೆ. ಏ.12 ರಂದು ಐದು ಅಭ್ಯರ್ಥಿಗಳಿಂದ 6 ನಾಮಪತ್ರಗಳು, ಏ.15 ರಂದು 8 ಅಭ್ಯರ್ಥಿಗಳಿಂದ 9 ನಾಮಪತ್ರಗಳು ಹಾಗೂ ಏ.16 ರಂದು 3 ಅಭ್ಯರ್ಥಿಗಳಿಂದ 3 ನಾಮಪತ್ರಗಳು, ಏ.17 ರಂದು 6 ಅಭ್ಯರ್ಥಿಗಳಿಂದ 6 ನಾಮಪತ್ರ, ಏ.18 ರಂದು 10 ಅಭ್ಯರ್ಥಿಗಳಿಂದ 10 ನಾಮಪತ್ರಗಳು ಹಾಗೂ ಕೊನೆ ದಿನ ಏ.19 ರಂದು 14 ಅಭ್ಯರ್ಥಿಗಳಿಂದ 20 ನಾಮಪತ್ರಗಳು ಸಲ್ಲಿಕೆಯಾಗಿವೆ. ಒಂದಕ್ಕಿಂತ ಹೆಚ್ಚು ನಾಮಪತ್ರ ಸಲ್ಲಿಸಿದವರು; ಕಾಂಗ್ರೆಸ್‌ನಿಂದ ಡಾ; ಪ್ರಭಾ ಮಲ್ಲಿಕಾರ್ಜುನ್ ನಾಲ್ಕು ನಾಮಪತ್ರ, ಬಿಜೆಪಿಯಿಂದ ಜಿ.ಎಸ್.ಗಾಯಿತ್ರಿ 4, ಬಿಜೆಪಿಯಿಂದ ಜಿ.ಎಂ.ಸಿದ್ದೇಶ್ವರ 3, ಕೆಆರ್‌ಎಸ್ ಪಕ್ಷದ ರಾಘವೇಂದ್ರ ಜಿ.ಪಿ 2, ಸೋಷಿಯಲ್ ಯುನಿಟಿ ಸೆಂಟರ್ ಆಫ್ ಇಂಡಿಯಾ ಪಕ್ಷದಿಂದ ತಿಪ್ಪೇಸ್ವಾಮಿ ಕೆ.ಎ 3 ನಾಮಪತ್ರ, ಪಕ್ಷೇತರರಾಗಿ ವಿನಯ್‌ಕುಮಾರ್ ಜಿ.ಬಿ. 4 ನಾಮಪತ್ರ ಸಲ್ಲಿಸಿದ್ದಾರೆ. ಜನಹಿತ ಪಕ್ಷದ ದೊಡ್ಡೇಶಿ ಹೆಚ್. ಎಸ್ ಇವರು ಠೇವಣಿ ಹಣ ಭರಿಸಲು ರೂ.10 ಮುಖಬೆಲೆಯ ನಾಣ್ಯಗಳನ್ನು ತಂದಿದ್ದರು. ನಾಮಪತ್ರಗಳ ಪರಿಶೀಲನೆ; ಲೋಕಸಭಾ ಚುನಾವಣೆಗೆ ಅಭ್ಯರ್ಥಿಗಳು ಸಲ್ಲಿಸಿದ ನಾಮಪತ್ರಗಳ ಪರಿಶೀಲನೆ ಏಪ್ರಿಲ್ 20 ರಂದು ಬೆಳಗ್ಗೆ 11 ಗಂಟೆಯಿಂದ ಆರಂಭವಾಗಲಿದೆ.

### ಮತದಾನ ಜಾಗೃತಿಗೆ ಸಾಂಸ್ಕೃತಿಕ ಸಂಗೀತ ಸಂಜೆ ಕಾರ್ಯಕ್ರಮ

» ದಾವಣಗೆರೆ

ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ-2024 ರ ಮತದಾನ ಜಾಗೃತಿಗೆ ಏಪ್ರಿಲ್ 23 ರಂದು ಸಂಜೆ 5 ಗಂಟೆಗೆ ನಗರದ ಪಿ.ಬಿ.ರಸ್ತೆಯಲ್ಲಿರುವ ರೇಣುಕಾ ಮಂದಿರದಲ್ಲಿ ಸಂಗೀತ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ದಾವಣಗೆರೆ ಯುವ ಚಲನಚಿತ್ರ ನಟ ಪೃಥ್ವಿ ಶಾಮನೂರು, ಹಿನ್ನಲೆ ಗಾಯಕಿಯರಾದ ಸೃಷ್ಠಿ ಶಾಮನೂರು, ಶೃತಿ ಪ್ರಹ್ಲಾದ್, ಬಿ.ಸಿ.ಎಂ ಅಧಿಕಾರಿ ಹಾಗೂ ಗಾಯಕರಾದ ರವೀಂದ್ರಕುಮಾರ್ ಅಥರ್ಗಾ, ಜನಪದ ಹಾಡುಗಾರ ಯುಗಧರ್ಮ ರಾಮಣ್ಣ ಇವರಿಂದ ಸಂಗೀತ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಾರ್ವಜನಿಕರಿಗೆ ಮುಕ್ತ ಅವಕಾಶ ಇದ್ದು ಭಾಗವಹಿಸಬಹುದಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

# ರಾಜ್ಯದಲ್ಲಿ ಹಿಂದುಗಳ ಮೇಲೆ ನಿರಂತರ ದೌರ್ಜನ್ಯ

» ಚಿತ್ರದುರ್ಗ



ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರ ವಹಿಸಿಕೊಂಡ ದಿನದಿಂದ ನಿರಂತರವಾಗಿ ಹಿಂದುಗಳ ಮೇಲೆ ದೌರ್ಜನ್ಯ ನಡೆಯುತ್ತಿದೆ ಎಂದು ಬಜರಂಗದಳ ಕರ್ನಾಟಕ ದಕ್ಷಿಣದ ಪ್ರಾಂತ ಸಂಯೋಜಕ ಪ್ರಭಂಜನ ಆರೋಪಿಸಿದ್ದಾರೆ.

ಈ ಬಗ್ಗೆ ಹೇಳಿಕೆಯನ್ನು ನೀಡಿರುವ ಅವರು, ಬೆಂಗಳೂರಿನ ನಗರ್ತಾರ್ ಪೇಟೆಯಲ್ಲಿ ಹನುಮಾನ್ ಚಾಲೀಸಾ ಹಾಕಿದ್ದಾರೆಂದು ಕೆಲವು ಮುಸ್ಲಿಂ ಯುವಕರು ಅಂಗಡಿಗೆ ನುಗ್ಗಿ ಮನಸೋ ಇಚ್ಛೆ ಹಲ್ಲೆ ಮಾಡಿದ್ದಾರೆ. ಅದೇ ರೀತಿ ಬೆಂಗಳೂರಿನ ಬನಶಂಕರಿಯ ಪ್ರಗತಿಪುರದಲ್ಲಿ ಕೆಲವು ಮುಸಲ್ಮಾನ ಯುವಕರು ಹಿಂದೂ ಕುಟುಂಬದ ಮೇಲೆ ಹಲ್ಲೆ ಮಾಡಿದ್ದಾರೆ. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಪೋಟ ಮಾಡಿ 42 ದಿನಗಳ ಕಾಲ ತಲೆ ಮರಿಸಿಕೊಂಡು ಇದ್ದ ಭಯೋತ್ಪಾದಕರ ಬೆನ್ನಿಗೆ ನಿಂತವರು ಯಾರು ಎಂಬುದು ಯೋಚನೆ ಮಾಡಬೇಕು ಎಂದು ಆಗ್ರಹಿಸಿದರು.

ದಾವಣಗೆರೆಯ ಚನ್ನಗಿರಿ ತಾಲೂಕಿನಲ್ಲಿ ರಾಮನವಮಿ ಮಾಡಬೇಕಾದರೆ ಮುಸಲ್ಮಾನ ಯುವಕರು ವಿರೋಧ ಮಾಡಿ ಹಲ್ಲೆ ಮಾಡಿದ್ದಾರೆ. ಬೆಂಗಳೂರಿನ ವಿದ್ಯಾರಣ್ಯಪುರದಲ್ಲಿ ಕಾರ್‌ನಲ್ಲಿ ಬರುತ್ತಿರುವವರು ಹಿಂದೂ ಅಂತ ಗೊತ್ತಾದ ತಕ್ಷಣ ಗಾಂಜಾ ಮತ್ತಿನಲ್ಲಿ ಇದ್ದ ಮುಸ್ಲಿಂ ಗುಂಡಾಗಳು ಜೈ ಶ್ರೀರಾಮ್ ಘೋಷಣೆ ಕೂಗಿದ್ದಕ್ಕೆ ಹಲ್ಲೆ ಮಾಡಲು ಯತ್ನಿಸಿದ್ದಾರೆ. ಮೇಲಿನ ಎಲ್ಲಾ ಘಟನೆಗಳು ನಡೆಯಲು ರಾಜ್ಯ ಸರ್ಕಾರದ ಅಲ್ಪಸಂಖ್ಯಾತರ ಓಲೈಕೆಯೇ ತುಷ್ಟಿಕರಣವೇ ಕಾರಣವಾಗಿದೆ ಎಂದು ದೂರಿದ್ದಾರೆ.

ಸರ್ಕಾರದ ಒತ್ತಡದ ಕಾರಣಕ್ಕೆ ಮಣಿದ ಆಡಳಿತ ವ್ಯವಸ್ಥೆ ವಿಶ್ವ ಹಿಂದೂ ಪರಿಷತ್ ಪ್ರಾಂತ ಕಾರ್ಯಕಾರಿಣಿ ಸದಸ್ಯರಾದ ರಘು ಸಕಲೇಶಪುರ, ಬಜರಂಗದಳ ಕಾರ್ಯಕರ್ತರಾದ ಶಿವು, ಪುತ್ತೂರು ಸಂಯೋಜಕ ಭರತ್ ಕುಮ್ಡೇಲ್ ಮತ್ತು ಸಂತೋಷ್ ತುಂಬೆ, ಮಂಗಳೂರಿನ ಜಯಪ್ರಕಾಶ್ ಚಿಕ್ಕಮಂಗಳೂರು ಜಿಲ್ಲೆಯ ಮಂಜು ತುಡುಕೂರ್ ಇನ್ನು ಮುಂತಾದ ಕಾರ್ಯಕರ್ತರ ಮೇಲೆಮೇಲೆ ಗೂಂಡಾ ಕಾಯ್ದೆ, ಗಡಿಪಾರು ಮಾಡಿ ಹತ್ತಿಕುವ ಕೆಲಸ ಮಾಡುತ್ತಿದೆ ಎಂದರು.

ನಾಚಿಕೆಗೇಡಿನ ಸರ್ಕಾರ ರಾಜ್ಯದ ಶಕ್ತಿ ಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದರೆ ಅದನ್ನ ಸಮರ್ಥಿಸಿಕೊಳ್ಳುವ ಸರ್ಕಾರಗಳಿಂದ ಏನು ನಿರೀಕ್ಷೆ ಮಾಡಲು ಸಾಧ್ಯ. ನಿನ್ನೆ ಚಿತ್ರದುರ್ಗ ನಗರದಲ್ಲಿ ಉಮೇಶ್ ನಾಯಕ್ ಎಂಬ ಯುವಕ ಜೊತೆಯಾಗಿ ಕೆಲಸ ಮಾಡುವ ಮುಸ್ಲಿಂ ಯುವತಿಯನ್ನು ಮನೆಗೆ ಬಿಡಲು ಬೈಕ್ ನಲ್ಲಿ ಹೋಗುವಾಗ ಮುಸ್ಲಿಂ ಯುವಕರು ಆ ಯುವಕನಿಗೆ ಹಲ್ಲೆ ಮಾಡಿದ್ದಾರೆ. ಎಚ್ಚರಗೊಳ್ಳಿ ಹಿಂದುಗಳೇ ಇಂದು ಕಾಂಗ್ರೆಸ್ ಮಯರ್ ಮಗಳಾದ ನೇಹಾ ಎಂಬ ಕಾಲೇಜು ಕಲಿಯುತ್ತಿದ್ದ ಯುವತಿಯನ್ನ ಲವ್ ಜಿಹಾದ್ ಗೆ ಬೀಳಲಿಲ್ಲ ಎಂದು ಸಾರ್ವಜನಿಕವಾಗಿ 9 ಬಾರಿ ಇರಿದು ಕೊಂದ ಫಯಾಜ್ ಯಾವ ಶಕ್ತಿ ಬೆನ್ನ ಹಿಂದೆ ಇದೆ ಎಂದು ಅರ್ಥ ಮಾಡಿಕೊಳ್ಳಬೇಕಾಗಿದೆ ಎಂದು ಪ್ರಭಂಜನ ತಿಳಿಸಿದ್ದಾರೆ.

# ಜಿಹಾದಿ ಮನಸ್ಥಿತಿಯ ಯುವಕರನ್ನು ಬಂಧಿಸಿ

» ಚಿತ್ರದುರ್ಗ



ಹಿಂದೂ ಯುವಕನ ಮೇಲೆ ಹಲ್ಲೆ ಮಾಡಿರುವ ಜಿಹಾದಿ ಮನಸ್ಥಿತಿಯ ಮುಸ್ಲಿಂ ಯುವಕರನ್ನು ಕೂಡಲೇ ಬಂಧಿಸಬೇಕು ಎಂದು ಆಗ್ರಹಿಸಿ ವಿಶ್ವ ಹಿಂದು ಪರಿಷತ್ ಹಾಗೂ ಬಜರಂಗದಳ ಕಾರ್ಯಕರ್ತರು ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ಚಿತ್ರದುರ್ಗ ನಗರದ ಬಟ್ಟೆ ಅಂಗಡಿಯಲ್ಲಿ ಜೊತೆಯಲ್ಲೇ ಕೆಲಸ ಮಾಡುವ ಯುವತಿ ಒಬ್ಬಳನ್ನು ಮನೆಯ ಹತ್ತಿರ ಬಿಡಲು ಹೋದ ಸಂದರ್ಭದಲ್ಲಿ ಏಕಾಏಕಿ ಮುಸ್ಲಿಂ ಯುವಕರು ಹಿಂದು ಯುವಕನ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ ಎಂದರು.

ಕಳೆದ ಕೆಲವು ತಿಂಗಳಿಂದ ಜಿಹಾದಿ ಮಾನಸಿಕತೆಯ ಯುವಕರು ಮಿತಿಮೀರಿ ವರ್ತಿಸುತ್ತಿದ್ದು, ಬೆಂಗಳೂರಿನ ನಗರ ಪೇಟೆಯಲ್ಲಿ ಅನುಮಾನ್ ಚಾ ಲೀಸ ಹಾಕಿದ. ಮುಸಲ್ಮಾನ್ ಯುವಕರು ಮನಸೋಯಿಚ್ಚೆಯಂತೆ ಹಲ್ಲೆ ಮಾಡಿದ್ದಾರೆ. ಅದೆ ರೀತಿ ಬೆಂಗಳೂರಿನ ಬನಶಂಕರಿ ಭಾಗದಲ್ಲಿ ಮುಸ್ಲಿಂ ಯುವಕರು ಹಿಂದೂ ಕುಟುಂಬದ ಮೇಲೆ ಹಲ್ಲೆ ಮಾಡಿದ್ದಾರೆ.

ಕಳೆದ 2 ದಿನಗಳ ಹಿಂದೆ ಚನ್ನಗಿರಿಯ ನಲ್ಲೂರಿನಲ್ಲಿ ರಾಮನವಮಿ ಆಚರಣೆ ಮಾಡುವ ಸಂದರ್ಭದಲ್ಲಿ ಜಿಹಾದಿಗಳು ಹಿಂದುಗಳ ಹಲ್ಲೆ ಮಾಡಿದ್ದಾರೆ. ಅದೇ ರೀತಿ ಹುಬ್ಬಳ್ಳಿಯಲ್ಲಿ ಲವ್ ಜಿಹಾದ್ ಬಲೆಗೆ ಕಾರಣ ಹಿಂದೂ ಯುವತಿಯನ್ನ ಮುಸ್ಲಿಂ ಯುವಕನೊರ್ವ 9 ಬಾರಿ ಆಕೆಯನ್ನು ಹಿರಿದು ಕೊಂದಿದ್ದಾನೆ. ಮೊನ್ನೆ ಬೆಂಗಳೂರಿನಲ್ಲಿ ಜೈ ಶ್ರೀ ರಾಮ್ ಘೋಷಣೆ ಕೂಗಿದ ಕಾರಣ ಪ್ರತಿಯಾಗಿ ಅಲ್ಲಾ ಹೂ ಅಕ್ಬರ್ ಎಂದು ಹೇಳಬೇಕೆಂದ ಹಲ್ಲೆ ಮಾಡಲು ಯತ್ನಿಸಿದ್ದಾನೆ ಎಂದಿದ್ದಾರೆ.

ಇಂತಹ ಘಟನೆಗಳು ನಿರಂತರವಾಗಿ ನಡೆಯುತ್ತಿರುವುದನ್ನು ಕಂಡು ಜಿಹಾದಿ ಮಾನಸಿಕತೆಯ ಯುವಕರನ್ನು 2 ದಿನಗಳಲ್ಲಿ ಬಂಧಿಸದಿದ್ದರೆ ಬೃಹತ್ ಪ್ರತಿಭಟನೆ ಕೈಗೊಳ್ಳಲಾಗುವುದು ಎಂದು ವಿಶ್ವ ಹಿಂದೂ ಪರಿಷತ್ ಬಜರಂಗದಳ ಆಗ್ರಹಿಸುತ್ತದೆ.

ಈ ಸಂದರ್ಭದಲ್ಲಿ ಸರ್ದಾರ್ ಸೇವಾಲಾಲ್ ಶ್ರೀಗಳು, ವಿಶ್ವ ಹಿಂದು ಪರಿಷತ್‌ನ ರುದ್ರೇಶ್ ಭಜರಂಗ ದಳದ ಕರ್ನಾಟಕ ದಕ್ಷಿಣದ ಪ್ರಾಂತ ಸಯೋಜಕ ಪ್ರಭಂಜನ್, ಬಿಜೆಪಿ ಮುಖಂಡ ಡಾ.ಸಿದ್ಧಾರ್ಥ, ಗುಂಡಾರ್ಪಿ, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬದರಿನಾಥ್, ಟೈಗರ್ ತಿಪ್ಪೇಸ್ವಾಮಿ ಭಾಗವಹಿಸಿದ್ದರು.

## ಎತ್ತಿನ ಬಂಡಿ ಮೆರವಣಿಗೆ ಮೂಲಕ ಮತದಾನ ಜಾಗೃತಿ



» ಚಿತ್ರದುರ್ಗ

ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಹಿರೇಗುಂಟನೂರು ಹೋಬಳಿ ವ್ಯಾಪ್ತಿಯಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ಸಾಂಪ್ರಾದಾಯಿಕ ಎತ್ತಿನ ಬಂಡಿಯ ಮೆರವಣಿಗೆ ಮೂಲಕ ಮತದಾನ ಜಾಗೃತಿ ಜಾಥಾ ನಡೆಯಿತು. ಎತ್ತಿನ ಬಂಡಿ ಮೆರವಣಿಗೆ ಮೂಲಕ ಮತದಾನ ಜಾಗೃತಿ ಮೂಡಿಸಿದ್ದು, ಎಲ್ಲರ ಗಮನ ಸೆಳೆಯಿತು. ಇದರ ಜೊತೆಗೆ ಬಣ್ಣ ಬಣ್ಣದ ರಂಗೋಲಿಗಳ ಚಿತ್ತಾರಗಳ ಮೂಲಕ "ನನ್ನ ಮತ ನನ್ನ ಹಕ್ಕು" ಎಂಬ ಮತದಾನದ ಮಹತ್ವ ಸಾರುವ ಮೂಲಕ ಮತದಾರರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು. ಇದೇ ವೇಳೆ ನೆರದಿದ್ದ ನಾಗರಿಕರಿಗೆ ಮತದಾನದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗ ಅನಂತರಾಜು ಸೇರಿದಂತೆ ತಾಲ್ಲೂಕಿನ ವಿವಿಧ ಇಲಾಖಾ ಮಟ್ಟದ ಅಧಿಕಾರಿಗಳು ಮತ್ತು ಹಿರೇಗುಂಟನೂರು ಹೋಬಳಿ ವ್ಯಾಪ್ತಿಯ ಎಲ್ಲಾ ಪಿ.ಡಿ.ಓ ಹಾಗೂ ಸಿಬ್ಬಂದಿ ವರ್ಗದವರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತರು ಇದ್ದರು.

# ದಾವಣಗೆರೆ ಸೌಭಾಗ್ಯ ಬೀಳಗಿಮಠಗೆ ಸನ್ಮಾನ

» ದಾವಣಗೆರೆ



ದ್ವಿತೀಯ ಪಿ.ಯು.ಸಿ ವರೆಗೆ ದಾವಣಗೆರೆಯಲ್ಲಿ ವ್ಯಾಸಂಗ ಮಾಡಿ ಬಿಎಸ್ಸಿ ಕೃಷಿಯೊಂದಿಗೆ ಯುಪಿಎಸ್‌ಸಿ ನಡೆಸುವ ಅಖಿಲ ಭಾರತ ನಾಗರಿಕ ಸೇವಾ ಪರೀಕ್ಷೆಯಲ್ಲಿ 101 ನೇ ರ್‍ಯಾಂಕ್ ಪಡೆದ ಸೌಭಾಗ್ಯ ಬೀಳಗಿಮಠ ಇವರಿಗೆ ಅಭಿನಂದನಾ ಪತ್ರ ಹಾಗೂ ಪುಸ್ತಕವನ್ನು ಉಡುಗೊರೆಯಾಗಿ ನೀಡುವ ಮೂಲಕ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಸನ್ಮಾನಿಸಿ ಗೌರವಿಸಿದರು.

ದಾವಣಗೆರೆಯಲ್ಲಿ ಓದಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಲಾಗಿದೆ. ಯಾವುದೇ ಕೋಚಿಂಗ್ ಕೇಂದ್ರದಲ್ಲಿ ತರಬೇತಿ ಪಡೆಯದೇ ಪುಸ್ತಕಗಳನ್ನು ಓದುವ ಮೂಲಕ ಸ್ವಂತ ಓದಿನಿಂದ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಅತ್ಯುನ್ನತ ರ್‍ಯಾಂಕ್ ಪಡೆದಿರುವುದಕ್ಕೆಹೆಮ್ಮೆಯಿಂದಸನ್ಮಾನಿಸಲಾಗುತ್ತಿದೆ ಎಂದ ಜಿಲ್ಲಾಧಿಕಾರಿಯವರು ನಿಮ್ಮ ಸೇವಾ ಅವಧಿಯಲ್ಲಿ ಸಾಧನೆ ಮಾಡಿದವರಿಗೆ ಇದೇ ರೀತಿ ಸನ್ಮಾನಿಸಿ ಗೌರವಿಸುವ ಕೆಲಸ ಮಾಡಿದಲ್ಲಿ ಅವರು ಸಹ ನಿಮ್ಮಂತೆ ಶ್ರಮಪಟ್ಟು ಓದುವ ಮೂಲಕ ಉನ್ನತ ಸ್ಥಾನಕ್ಕೇರುವರು ಎಂದರು.

22 ವರ್ಷದ ಸೌಭಾಗ್ಯ ಬೀಳಗಿಮಠ ಇವರು ಪ್ರೌಢ ಶಿಕ್ಷಣವನ್ನು ದಾವಣಗೆರೆಯಲ್ಲಿ ಜಿಲ್ಲಾಧಿಕಾರಿಗಳ ನಿವಾಸದ ಹತ್ತಿರವಿರುವ ಎಜು ಏಷಿಯಾ ಶಾಲೆಯಲ್ಲಿ ಮತ್ತು ಪಿಯುಸಿಯನ್ನು ಸಿದ್ದಗಂಗಾ ಶಾಲೆಯಲ್ಲಿ ಪೂರೈಸಿ ಧಾರವಾಡದಲ್ಲಿ ಕೃಷಿ ಪದವಿ ಪಡೆದಿರುತ್ತಾರೆ.

ಈ ವೇಳೆ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಸೌಭಾಗ್ಯ ಬೀಳಗಿಮಠ ಇವರ ತಂದೆ ಶರಣಯ್ಯಸ್ವಾಮಿ, ತಾಯಿ ಶರಣಮ್ಮ, ಸಹೋದರ, ಮಾರ್ಗದರ್ಶನ ಮಾಡಿದ ಪ್ರೊಫೆಸರ್ ಡಾ; ಅಶ್ವಿನಿ, ಜಿಲ್ಲಾ ಮುಖ್ಯ ಗ್ರಂಥಾಲಯಾಧಿಕಾರಿ ಪಿ.ಆರ್.ತಿಪ್ಪೇಸ್ವಾಮಿ ಅವರು ಉಪಸ್ಥಿತರಿದ್ದರು.

## ಬಹುಗ್ರಾಮ ಕುಡಿಯುವ ನೀರು ಕಾಮಗಾರಿ ವೀಕ್ಷಣೆ



» ಚಿತ್ರದುರ್ಗ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಗುರುವಾರ ವಾಣಿ ವಿಲಾಸ ಸಾಗರದಲ್ಲಿ ಐಮಂಗಲ ಹಾಗೂ ಹೊಳಲ್ಕೆರೆ ತಾಲ್ಲೂಕಿನ ಬಹುಗ್ರಾಮ ಕುಡಿಯುವ ನೀರಿನ ಕಾಮಗಾರಿ ಪ್ರಗತಿ ವೀಕ್ಷಣೆ ಮಾಡಿದರು. ಜಾಕ್ ವೆಲ್ ಪಾಯಿಂಟ್, ಎಂ.ಎಸ್. ಪೈಪ್ ಸ್ಟಾಕ್ ಯಾರ್ಡ್‌ಗೆ ಭೇಟಿ ನೀಡಿದ ಅವರು ಹೊಳಲ್ಕೆರೆ ತಾಲೂಕಿನ ಹಾಲೇನಹಳ್ಳಿಯಲ್ಲಿ ನೀರು ಶುದ್ಧೀಕರಣ ಘಟಕ ಹಾಗೂ ಚೌಡಗೊಂಡನಹಳ್ಳಿ ಗ್ರಾಮದಲ್ಲಿ ಜಲಜೀವನ್ ಮಿಷನ್ ಯೋಜನೆಯ ಕಾರ್ಯಾತ್ಮಕ ನಳ ಸಂಪರ್ಕ ಕಾಮಗಾರಿಯನ್ನು ವೀಕ್ಷಿಸಿದರು. ಇದೇ ವೇಳೆ ಸ್ವಚ್ಛಭಾರತ ಮಿಷನ್ ಯೋಜನೆಯ ಮಲ ನಿರ್ವಹಣೆ ಘಟಕ ಮತ್ತು ಘನ ತ್ಯಾಜ್ಯ ನಿರ್ವಹಣೆ ಘಟಕಗಳ ಪರಿಶೀಲನೆ ನಡೆಸಿದರು.

## ಪ್ರಮುಖ ಸುದ್ದಿ

# ಬಿಜೆಪಿಗೆ ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿ

» ಮೊದಲ ಪುಟದಿಂದ



ಚಿತ್ರದುರ್ಗ ನಗರದ ದುರ್ಗದ ಸಿರಿ ಹೋಟೇಲ್‌ನಲ್ಲಿ ನಡೆದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕರ್ನಾಟಕಕ್ಕೆ ಮೋದಿ ಸರ್ಕಾರ ಚೆಂಬು ನೀಡಿದೆ 27ಬಿಜೆಪಿ-ಜೆಡಿಎಸ್ ಸಂಸದರು ರಾಜ್ಯದ ಬಗ್ಗೆ ಪ್ರಶ್ನಿಸದೆ ಚೆಂಬು ನೀಡಿದ್ದಾರೆ ಕಾಂಗ್ರೆಸ್ ರಾಜ್ಯದಲ್ಲಿ ನುಡಿದಂತೆ ಪಂಚ ಗ್ಯಾರಂಟಿ ಜಾರಿಗೊಳಿಸಿದೆ ಕೇಂದ್ರದಲ್ಲಿ ಗ್ಯಾರಂಟಿ ಯೋಜನೆ ತರುವುದಾಗಿ ಘೋಷಿಸಿದ್ದೇವೆ. ನಾವು ಜನ ಕಲ್ಯಾಣ ಗ್ಯಾರಂಟಿಗಳನ್ನು ಘೋಷಿಸಿದ್ದೇವೆ ಅಂಬಾನಿ, ಅದಾನಿ ಕಲ್ಯಾಣ ಗ್ಯಾರಂಟಿ ಅಲ್ಲ ರಾಜ್ಯದ ಸಿಎಂ ಸಿದ್ಧರಾಮಯ್ಯರಿಂದ ಸಮರ್ಥ ಆಡಳಿತ ಐದು ವರ್ಷ ಕಾಲ ಕಾಂಗ್ರೆಸ್ ಉತ್ತಮ ಆಡಳಿತ ನೀಡಲಿದೆ ಸಿಎಂ, ಡಿಸಿಎಂ, ಸಚಿವರು, ಶಾಸಕರು ಒಟ್ಟಾಗಿ ಚುನಾವಣೆ ಎದುರಿಸುತ್ತೇವೆ ಎಂದು ರಣದೀಪ್ ಸಿಂಗ್ ಸುರ್ಜೆವಾಲಾ ಹೇಳಿದರು

ನಮ್ಮ ಮುಂದೆ ದೇಶದಲ್ಲಿ ಎರಡು ಮಾಡಲ್‌ಗಳಿವೆ ಒಂದು ಖರ್ಗೆ, ರಾಹುಲ್ ಗ್ಯಾರಂಟಿ ಮಾಡಲ್ ಮತ್ತೊಂದು ಚಂಬು ಮಾಡಲ್ ಎಂದು ಮೋದಿ ವಿರುದ್ಧ ಟೀಕಿಸಿ, ಜನರು ಚಂಬು ಮಾಡಲ್ ಬೇಕೋ, ಅಭಿವೃದ್ಧಿ ಮಾಡಲ್ ಬೇಕೋ ನಿರ್ಧರಿಸಲಿ ಎಂದು ಅವರು, ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯ ಸರ್ಕಾರಕ್ಕೆ ಯಾವ ಸಮಯದಲ್ಲೂ ಸಹಾ ಸಹಾಯವನ್ನು ಮಾಡಿಲ್ಲ ಬರಗಾಲ ಬಂದಿದೆ ಎಂದು ಪರಿಹಾರವನ್ನು ನೀಡುವಂತೆ ಮನವಿ ಮಾಡಿದರು ಸಹಾ ಅದರ ಬಗ್ಗೆ ಮೋದಿಯವರು ಯಾವ ಮಾತನ್ನು ಆಡಿಲ್ಲ, ಜಿ.ಎಸ್.ಟಿ.ಯಲ್ಲಿ ನಮ್ಮ ಪಾಲನ್ನು ಸಹಾ ಸರಿಯಾದ ರೀತಿಯಲ್ಲಿ ನೀಡಲ್ಲ, ಬೇರೆ ರಾಜ್ಯಗಳಿಗೆ ಹೆಚ್ಚಿನ ರೀತಿಯ ಸಹಾಯವನ್ನು ಮಾಡುವ ಪ್ರಧಾನ ಮಂತ್ರಿಗಳು ಕರ್ನಾಟಕಕ್ಕೆ ಮಾತ್ರ ಮಲತಾಯಿ ಧೋರಣೆಯನ್ನು ಅನುಸರಿಸುತ್ತಿದ್ದಾರೆ. ದೇಶದ ಎಲ್ಲರ ಖಾತೆಗಳಿಗೆ 15 ಲಕ್ಷ ರೂ, ಹಾಕುತ್ತೇವೆ ಎಂದು ಹೇಳಿದ್ದರು 10 ವರ್ಷ ಕಳೆದರೂ ಸಹಾ ಅದರ ಬಗ್ಗೆ ಮಾತಿಲ್ಲ, ಇದುವರೆವಿಗೂ ಯಾರ ಖಾತೆಗೂ ಸಹಾ ಹಣ ಬಂದಿಲ್ಲ, ರೈತರ ಆದಾಯವನ್ನು ಹೆಚ್ಚಿಗೆ ಮಾಡುತ್ತೇವೆ ಎಂದವರು ಆವರು ಭೂಮಿಗೆ ಹಾಕಿದ ಹಣವೂ ಸಹಾ ಬಾರದ ರೀತಿಯಲ್ಲಿ ವಾತಾವರಣವನ್ನು ನಿರ್ಮಾಣ ಮಾಡಿದ್ದಾರೆ. ರಾಜ್ಯದಲ್ಲಿ ನೆರೆ ಬಂದಾಗಲೂ ಸಹಾ ಕೇಂದ್ರದಿಂದ ಯಾವ ಪರಿಹಾರವೂ ಸಹಾ ರಾಜ್ಯಕ್ಕೆ ಬಂದಿಲ್ಲ ಎಂದು ಸುರ್ಜೆವಾಲಾ ಆರೋಪಿಸಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರ ತನ್ನ ಮತದಾರರಿಗೆ ಐದು ಗ್ಯಾರೆಂಟಿಗಳನ್ನು ನೀಡಿತ್ತು ಅದರಂತೆವ ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಮತದಾರರಿಗೆ ನೀಡಿದ ಭರವಸೆಯಂತೆ ತನ್ನ ಐದು ಗ್ಯಾರೆಂಟಿಗಳನ್ನ ಈಡೇರಿಸಿದೆ ಈಗ ಅದೇ ಮಾದರಿಯಲ್ಲಿ ಕಾಂಗ್ರೆಸ್ ಪಕ್ಷದ ಈ ಸಾರಿಯ ಲೋಕಸಭಾ ಚುನಾವಣೆಯಲ್ಲಿ ದೇಶದ ಮತದಾರರಿಗೆ ಐದು ಗ್ಯಾರೆಂಟಿಗಳನ್ನು ನೀಡಿದೆ ಕೇಂದ್ರದಲ್ಲಿ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಇವುಗಳನ್ನು ಈಡೇರಿಸುತ್ತದೆ ಕೊಟ್ಟ ಮಾತನ್ನು ಕಾಂಗ್ರೆಸ್ ಪಕ್ಷ ಯಾವೂತ್ತು ಸಹಾ ತಪ್ಪುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್, ಟಿ.ಬಿ.ಜಯಚಂದ್ರ, ಮಾಜಿ ಸಚಿವರಾದ ಹೆಚ್.ಅಂಜನೇಯ, ಶಾಸಕರುಗಳಾದ ರಘುಮೂರ್ತಿ, ವಿರೇಂದ್ರಪಪ್ಪಿ, ಗೋಪಾಲಕೃಷ್ಣ, ಬಿ.ಜಿ.ಗೋವಿಂದಪ್ಪ, 2024ರ ಚಿತ್ರದುರ್ಗ ಕಾಂಗ್ರೆಸ್ ಲೋಕಸಬಾ ಅಭ್ಯರ್ಥಿ ಬಿ.ಎ.ಚಂದ್ರಪ್ಪ, ಮಾಜಿ ಶಾಸಕರಾದ ಶ್ರೀಮತಿ ಪೂರ್ಣಿಮಾ, ಎ.ವಿ.ಉಮಾಪತಿ, ವಿಧಾನ ಪರಿಷತ್ ಮಾಜಿ ಸದಸ್ಯರಾದ ಶ್ರೀಮತಿ ಜಯಮ್ಮ, ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಮುಖಂಡರುಗಳಾದ ಹನುಮಲಿ ಷಣ್ಮುಖಪ್ಪ, ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಮರುಳಾರಾಧ್ಯ, ಓ.ಶಂಕರ್, ಜಿ.ಎಸ್.ಮಂಜುನಾಥ್, ಸಂಪತ್ ಕುಮಾರ್, ಮೈಲಾರಪ್ಪ, ಪ್ರಚಾರ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ, ಸೋಮಶೇಖರ್, ವಿಜಯಕುಮಾರ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಬಾಲ ಪ್ರತಿಭೆಗಳಿಂದ ಪದ್ಮವ್ಯೂಹದಲ್ಲಿ ಅಭಿಮನ್ಯು; ಇದೇ 21 ರಂದು ಮಾಸಿಕ ಗಮಕ ಕಾರ್ಯಕ್ರಮ

» ಚಿತ್ರದುರ್ಗ

ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘವು ನಡೆಸುತ್ತಿರುವ 'ಮಾಸಿಕ ಗಮಕ ಕಾರ್ಯಕ್ರಮ'ದ ಶೀರ್ಷಿಕೆಯಡಿಯಲ್ಲಿ ನಡೆಯುತ್ತಿದ್ದು. ಅದರಂತೆ ಈ ತಿಂಗಳ 21ನೇ ತಾರೀಕು ಭಾನುವಾರ ಸಂಜೆ 6ಗಂಟೆಗೆ ನಗರದ ಜೆಸಿಆರ್ ಬಡಾವಣೆಯ ಗಣಪತಿ ದೇವಾಲಯದ ಪ್ರಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು ಗಮಕ ಕಲಾಭಿಮಾನಿಗಳ ಸಂಘದ ಪದಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಉಡುಪಿಯ ಬಾಲಪ್ರತಿಭೆಗಳಿಂದ 'ಗಮಕ ವಾಚನ ಮತ್ತು ವ್ಯಾಖ್ಯಾನ ನಡೆಯಲಿದೆ.ವಾಚನವನ್ನು ಕು.ಪ್ರಣಾದರಾವ್,( ಪಿಯುಸಿ)ಅವರು ನಡೆಸಿಕೊಡಲಿದ್ದು, ವ್ಯಾಖ್ಯಾನವನ್ನು ಕುಮಾರಿ ಪ್ರಣತಿ ರಾವ್,(6ನೇತರಗತಿ) ,ಇವರು ನಡೆಸಿಕೊಡಲಿದ್ದಾರೆ. 'ಪದ್ಮವ್ಯೂಹದಲ್ಲಿ ಅಭಿಮನ್ಯು (ಆಧಾರ, ಕುಮಾರವ್ಯಾಸ ಭಾರತದ ದ್ರೋಣಪರ್ವ) ಕಥಾಭಾಗದ್ದಾಗಿದೆ ಎಂದು ತಿಳಿಸಿದ್ದಾರೆ. ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಮತ್ತು ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಕೋರಿಕೊಂಡಿದ್ದಾರೆ.

### ಮೊಬೈಲ್ ಹಾಗೂ ಆನ್‌ಲೈನ್ ಮೂಲಕ ಕರ ಪಾವತಿಗೆ ಅವಕಾಶ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆಯ ಆಸ್ತಿ ತೆರಿಗೆ, ನೀರಿನ ಕರ ಹಾಗೂ ಇತರೆ ಶುಲ್ಕಗಳನ್ನು ಮೊಬೈಲ್ ಹಾಗೂ ಆನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಮೊಬೈಲ್ ಅಪ್ಲಿಕೇಷನ್‌ಗಳಾದ ಭೀಮ್,ಭಾರತ್ ಬಿಲ್ ಪೇ,ಫೋನ್ ಪೇ,ಪೇಟಿಎಂ, ಗೂಗಲ್ ಪೇ ಗಳ ಮುಖಾಂತರ ಸಾರ್ವಜನಿಕರು ಕರ ಪಾವತಿಸಬಹದು. ಇಲ್ಲವಾದರೆ ಖಜಾನೆ-2 ತಂತ್ರಾಂಶದಲ್ಲಿ ಚಲನ್ ಸೃಜಿಸಿ ಯೂನಿಯನ್ ಬ್ಯಾಂಕ್, ಕೆನರಾ ಬ್ಯಾಂಕ್, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಗಳಲ್ಲಿ ಪಾವತಿಸಬಹುದಾಗಿದೆ. ಇದರ ಹೊರತಾಗಿ ನಗರಸಭೆ ಕಚೇರಿಯಲ್ಲಿನ ಹೆಚ್.ಡಿ.ಎಫ್.ಸಿ. ಬ್ಯಾಂಕ್ ಕೌಂಟರ್‌ನಲ್ಲಿಯು ಸಹ ಕರ ಪಾವತಿಸಬಹುದಾಗಿದೆ. ಸಾರ್ವಜನಿಕರು ಈ ಅವಕಾಶಗಳನ್ನು ಬಳಸಿ ಸುಗಮವಾಗಿ ನಗರಸಭೆಯ ಕರಗಳನ್ನು ಪಾವತಿಸುವಂತೆ ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

### ಓಬಯ್ಯನಹಟ್ಟಿಯ ಎಂ.ತಿಪ್ಪೇಸ್ವಾಮಿಗೆ ಪಿಎಚ್‌ಡಿ ಪದವಿ

» ಚಳ್ಳಕೆರೆ

ತಾಲ್ಲೂಕಿನ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತಮ್ಮ ಪರಿಶ್ರಮದಿಂದ ಡಾಕ್ಟರೇಟ್ ಪದವಿಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.



ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಓಬಯ್ಯನಹಟ್ಟಿಯ ಎಂ. ತಿಪ್ಪೇಸ್ವಾಮಿ ಸಹ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ ಆಂಗ್ಲವಿಭಾಗದಲ್ಲಿ ಮಹಾಪ್ರಬಂಧ ಮಂಡಿಸಿ ಡಾಕ್ಟರೇಟ್ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ವಿಶ್ವವಿದ್ಯಾಲಯದ ಹಿರಿಯ ಆಂಗ್ಲ ಪ್ರಾಧ್ಯಾಪಕ ಡಾ.ಎನ್.ಶಾಂತನಾಯ್ಕ್ ಮಾರ್ಗದರ್ಶನದಲ್ಲಿ "ಆಂಟಿ ಇಂಪೀರಿಯಲಿಸಮ್ ಅಂಡ್ ರಿಕನ್ಸಕ್ಷನ್ ಅಫ್ರಿಕನ್ ಇಮೇಜ್ ಇನ್ ಸೆಲೆಕ್ಟ್ ನಾವೆಲ್ಸ್ ಅಪ್ ಜೆ.ಎಂ. ಕಟ್ಜಿ" ಎಂಬ ವಿಷಯದಲ್ಲಿ ಮಂಡಿಸಿದ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿ ಲಭಿಸಿದ್ದು, ಶೀಘ್ರದಲ್ಲೇ ಪದವಿಪ್ರಧಾನ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.

### ಯಾಲಕಪ್ಪನಹಟ್ಟಿಯಲ್ಲಿ ಸಿಲಿಂಡರ್ ಸ್ಫೋಟ: 2 ಲಕ್ಷ ಮೌಲ್ಯದಷ್ಟು ನಷ್ಟ

» ಹೊಸದುರ್ಗ

ತಾಲ್ಲೂಕಿನ ಒಂದನೇ ಯಾಲಕಪ್ಪನಹಟ್ಟಿಯಲ್ಲಿ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಮನೆಯಲ್ಲಿದ್ದ ವಸ್ತುಗಳೆಲ್ಲಾ ಸಂಪೂರ್ಣವಾಗಿ ಸುಟ್ಟಿದ್ದು, ಅಪಾರ ನಷ್ಟವಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿಯಾಗಿಲ್ಲ. ಒಂದನೇ ಯಾಲಕಪ್ಪನಹಟ್ಟಿ ಗ್ರಾಮದ ಅಂಜಿನಪ್ಪ ಅವರ ಮನೆಯಲ್ಲಿ ಈ ಘಟನೆ ನಡೆದಿದೆ. ಸಿಲಿಂಡರ್ ಖಾಲಿಯಾಗಿದ್ದು, ಬೇರೊಂದು ಸಿಲಿಂಡರ್ ತಂದು, ಇನ್ನೇನು ಜೋಡಿಸಬೇಕು ಎನ್ನುವಷ್ಟರಲ್ಲಿ ಈ ಅವಘಡ ನಡೆದಿದೆ. ಮನೆಯ ಮೇಲ್ಛಾವಣಿ, ಮನೆಯಲ್ಲಿದ್ದ ವಸ್ತುಗಳೆಲ್ಲಾ ಭಸ್ಮವಾಗಿದ್ದು, ಸುಮಾರು ₹ 2 ಲಕ್ಷ ಮೌಲ್ಯದಷ್ಟು ನಷ್ಟವಾಗಿದೆ. ಕೂಡಲೇ ಸ್ಥಳಕ್ಕೆ ಆಗಮಿಸಿದ ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿ ಗುಡಗನಹಟ್ಟಿ, ಅಗ್ನಿಶಾಮಕರುಗಳಾದ ಅವಿನಾಶ್ ಅಮ್ಮಣಗಿ, ಮಾರುತಿ ಎಸ್, ರಂಗನಾಥ ಸಿ ಅವರ ತಂಡ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ದಲಿತರ ಸಮಾಧಿ ಮೇಲೆ ಸಿದ್ದು ಆಡಳಿತ

» ಚಿತ್ರದುರ್ಗ



ದಲಿತ ವಿರೋಧಿ ಬಿಜೆಪಿ ಎಂದು ಪಟ್ಟಕಟ್ಟಿರುವ ಕಾಂಗ್ರೆಸ್ ನಿಜವಾದ ದಲಿತ ವಿರೋಧಿಯಾಗಿದೆ. ಇದುವರೆಗೂ ಕಾಂಗ್ರೆಸ್‌ನವರು ದಲಿತರನ್ನು ಸಿಎಂ ಮಾಡಲಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ದೂರಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯದಲಿತವಿರೋಧಿಯಾಗಿದ್ದು, ದಲಿತರ ಸಮಾಧಿ ಮೇಲೆ ಚಕ್ರಾಧಿಪತ್ಯ ನಡೆಸುತ್ತಿದ್ದಾರೆ. ಅವರ ಆಡಳಿತ ಎಷ್ಟು ದಿನ ಇರುತ್ತದೆ ಎಂದು ನೋಡೋಣ ಎಂದರು.

30 ರಿಂದ 40 ಸ್ಥಾನಗಳನ್ನು ಗೆಲ್ಲಲ್ಲ ಎಂದು ತಿಳಿದ ಮೇಲೆ ಮೋದಿಯವರಿಗೆ ಬಾಯಿಗೆ ಬಂದಂತೆ ಮಾತಾಡುತ್ತಿದ್ದಾರೆ. ಗ್ಯಾರಂಟಿಗಳನ್ನು ನಾವು ವಿರೋಧ ಮಾಡುವುದಿಲ್ಲ. ಇವು ತಾತ್ಕಾಲಿಕ, ಬರುವ ಎಲ್ಲಾ ಹಣವನ್ನು ಗ್ಯಾರಂಟಿಗೆ ಕೊಡುತ್ತಾ ಅಭಿವೃದ್ಧಿಯಾಗಿಲ್ಲ.ಸರ್ಕಾರಬರುವಾಗಲೇ ದರಿದ್ರವನ್ನು ಹೊತ್ತು ಬಂದಿದೆ. ಇಂತಹ ಸರ್ಕಾರ ಕೇಂದ್ರದ ಮೇಲೆ ಬೆರಳು ಮಾಡುತ್ತಿದೆ. ಸಿದ್ದರಾಮಯ್ಯ ಅವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು, ಯಾವುದೇ ವಿಷಯವನ್ನು ಪೂರ್ಣವಾಗಿ ಹೇಳದೆ, ಹಾರಿಕೆ ಉತ್ತರ ನೀಡಿ ಮುಂದೆ ಹೋಗುತ್ತಾರೆ. ಗ್ಯಾರಂಟಿಗಳಿಂದ ರಾಜ್ಯವನ್ನು ದಿವಾಳಿಕಡೆಗೆ ತೆಗೆದುಕೊಂಡು ಹೋಗುತ್ತಿದ್ದಾರೆ ಎಂದರು.

ಅಂಬೇಡ್ಕರ್ ಅವರನ್ನು ದೇವರೆಂದು ನಂಬುವ ಜನ ಇನ್ನು ಕಾಂಗ್ರೆಸ್‌ನಲ್ಲಿದ್ದಾರೆ. ಇದಕ್ಕೆ ಏನು ಹೇಳಬೇಕೋ ತಿಳಿಯುತ್ತಿಲ್ಲ. ಎಸ್ಸಿಪಿ, ಟಿಎಸ್ಪಿ ಯೋಜನೆಯಲ್ಲಿ 24 % ರಷ್ಟು ಹಣವನ್ನು ತೆಗೆದಿರಿಸಬೇಕು. ಆದರೆ ಸಿದ್ದರಾಮಯ್ಯ, ಇದರಲ್ಲಿ 24 ಸಾವಿರದ ಕೋಟಿ ಹಣವನ್ನು ನುಂಗಿದ್ದಾರೆ. ಸಿದ್ದರಾಮಯ್ಯ ದಲಿತರ ವಂಚಕರು, ಮೋಸಗಾರರು ಇದಕ್ಕಾಗಿ ಅವರನ್ನು ನಂಬಬಾರದು ಎಂದು ತಿಳಿಸಿದರು.

ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಯನ್ನು ಅಪವಿತ್ರ ಮೈತ್ರಿ ಎಂದು ಕರೆಯುವ ಕಾಂಗ್ರೆಸ್ ನವರು ಯಾವುದು ಪವಿತ್ರ ಮತ್ತು ಅಪವಿತ್ರ ಎಂದು ಹೇಳಬೇಕು 70 ರ ದಶಕದಲ್ಲಿ ಕಾಂಗ್ರೆಸ್ ಸರ್ಕಾರವಿದ್ದು, ಆಗ ಎಮರ್ಜೆನ್ಸಿ ಜಾರಿಗೆ ತಂದು ಎಲ್ಲರ ಮೇಲೂ ದೌರ್ಜನ್ಯ ಮಾಡುತ್ತಾ, ಸಂವಿಧಾನವನ್ನು ತಿರುಚುವ ರೀತಿಯಲ್ಲಿ ಮಾಡಿದ್ದ ಇಂದಿರಾ ಗಾಂಧಿಯ ವಿರುದ್ಧ ವಿರೋಧ ಪಕ್ಷಗಳು ಸಿಡಿದೆದ್ದು, ಎಲ್ಲಾ ಪಕ್ಷಗಳನ್ನು ಮೈತ್ರಿ ಮಾಡಿಕೊಂಡಾಗ ಹುಟ್ಟಿಕೊಂಡಿದ್ದು, ಜನತಾ ಪಕ್ಷ ಈಗ ಕಾಂಗ್ರೆಸ್ ಹೇಳಬೇಕು. ಯಾವುದು ಮೈತ್ರಿ ಮತ್ತು ಅಪವಿತ್ರ ಮೈತ್ರಿ ಎಂದು ಹೇಳಬೇಕು ಎಂದು ಪ್ರಶ್ನಿಸಿದರು.

ಜಿಲ್ಲಾಧ್ಯಕ್ಷ ಮುರುಳಿ, ಮಾಧ್ಯಮ ವಕ್ತಾರ ನಾಗರಾಜ್ ಬೇದ್ರೆ, ದಗ್ಗೆ ಶಿವಪ್ರಕಾಶ್, ಛಲವಾದಿ ತಿಪ್ಪೇಸ್ವಾಮಿ ಇನ್ನಿತರರಿದ್ದರು.

## ಭೋವಿ ಗುರುಪೀಠಕ್ಕೆ ಸಲೀಂ ಅಹಮದ್ ಭೇಟಿ

■ ಚಿತ್ರದುರ್ಗ



ಧಾರವಾಡ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ವಿನೋದ ಅಸೂಟಿ, ಸಚಿವ ಸಂತೋಷ ಲಾಡ್ ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹಮದ್ ಅವರು ಸಿದ್ದರಾಮೇಶ್ವರ ಮಹಾಸಂಸ್ಥಾನ ಭೋವಿ ಗುರುಪೀಠಕ್ಕೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದರು.

ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಕುಂಚಿಟಿಗ ಗುರುಪೀಠದ ಶಾಂತವೀರ ಸ್ವಾಮೀಜಿ, ವಾಲ್ಮೀಕಿ ಗುರುಪೀಠದ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ಭಗೀರಥ ಗುರುಪೀಠದ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಯಾದವ ಗುರುಪೀಠದ ಕೃಷ್ಣ ಯಾದವಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಬಸವ ಮಾಚಿದೇವ ಸ್ವಾಮೀಜಿ, ಈಡಿಗ ಗುರುಪೀಠದ ರೇಣುಕಾನಂದ ಸ್ವಾಮೀಜಿ, ಹಡಪದ ಗುರುಪೀಠದ ಅನ್ನದಾನಿ ಭಾರತಿ ಅಪ್ಪಣ್ಣ ಸ್ವಾಮೀಜಿ, ಕುಂಬಾರ ಗುರುಪೀಠದ ಬಸವ ಕುಂಬಾರ ಗುಂಡಯ್ಯ ಸ್ವಾಮೀಜಿ, ಶಿವಶಕ್ತಿ ಗುರುಪೀಠದ ಬಸವಪ್ರಸಾದ ಸ್ವಾಮೀಜಿ, ಪಾರಮಾರ್ಥಿಕ ಗವಿಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಕೊರಟಗೆರೆ ಅನ್ನಪೂರ್ಣೇಶ್ವರಿ ಮಠದ ಬಸವ ಮಹಾಲಿಂಗ ಸ್ವಾಮೀಜಿ, ಬಸವಕಲ್ಯಾಣ ಶ್ರೀ ಸತ್ಯಕ್ಕ ತಾಯಿಯ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಚಂದ್ರಪ್ಪ ಜುಟ್ಟಲ್, ನರೇಶ ಮಲೆನಾಡು, ಗಿರೀಶ ಮಲೆನಾಡು, ಕವಿತಾ ರೆಡ್ಡಿ, ರಾಜೇಶ್ವರಿ ಪಾಟೀಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ನಗರಸಭೆ : ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬೀದಿನಾಟಕದ ಮೂಲಕ ಮತದಾನ ಜಾಗೃತಿ



» ಚಳ್ಳಕೆರೆ

ರಾಷ್ಟ್ರದ ಸಂವಿಧಾನ ಸಾರ್ವಜನಿಕರ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಸಾಕಷ್ಟು ಮಾಹಿತಿಯನ್ನು ನೀಡಿದೆ. ಪ್ರತಿಯೊಬ್ಬ ಪ್ರಜೆಯೂ ಸಂವಿಧಾನದ ಹಕ್ಕನ್ನು ಚಲಾಯಿಸುವ ಜೊತೆಗೆ ಕರ್ತವ್ಯವನ್ನು ನಿರ್ವಹಿಸಬೇಕಾಗಿದೆ. ಮತದಾನದ ಹಕ್ಕನ್ನು ಪಡೆದ ಪ್ರತಿಯೊಬ್ಬರೂ ಹಕ್ಕು ಚಲಾಯಿಸುವ ಮೂಲಕ ಸಂವಿಧಾನ ನಮಗೆ ನೀಡಿದ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ತಾಲ್ಲೂಕು ಸ್ವೀಪ್ ಸಮಿತಿ ಕಾರ್ಯದರ್ಶಿ, ಪೌರಾಯುಕ್ತ ಕೆ.ಜೀವನ್‌ಕಟ್ಟಿಮನಿ ತಿಳಿಸಿದರು.

ಅವರು, ಶುಕ್ರವಾರ ನಗರದ ಕೆಎಸ್‌ಆರ್‌ಟಿಸಿ, ಖಾಸಗಿ ಬಸ್ಟಾಂಡ್‌ನಲ್ಲಿ ನಗರಸಭೆಯಿಂದ ಹಮ್ಮಿಕೊಳ್ಳಲಾದ ಮತದಾನ ಜಾಗೃತಿ ಕಾರ್ಯಕ್ರಮದ ಬೀದಿನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು. ಮತದಾನ ಜಾಗೃತಿಗಾಗಿ ಜಿಲ್ಲಾ ಸ್ವೀಪ್ ಸಮಿತಿ ಮಾರ್ಗದರ್ಶನದಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ಬೈಕ್‌ರ್‍ಯಾಲಿ, ರಂಗೋಲಿ ಸ್ಪರ್ಧೆ, ಮನೆ, ಮನೆಗೂ ಭೇಟಿ ಮುಂತಾದ ಕಾರ್ಯಕ್ರಮಗಳನ್ನು ಆಯೋಜಿಸಿ ಮತದಾರರನ್ನು ಜಾಗೃತಗೊಳಿಸಲಾಗಿದೆ. ಇಂದು ಮುತ್ತುರಾಜ್ ಸಾಂಸ್ಕೃತಿಕ ಸಂಘದ ಸಹಯೋಗದಲ್ಲಿ ಬೀದಿನಾಟಕದ ಮೂಲಕ ಮತದಾನ ಜಾಗೃತಿಯನ್ನು ಮೂಡಿಸಲಾಗುತ್ತಿದೆ ಎಂದರು. ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು ಮಾತನಾಡಿ, ಮುಕ್ತವಾದ ಮತದಾನವಾಗಬೇಕು ಎಂಬುವುದು ಚುನಾವಣಾ ಆಯೋಗದ ನಿರ್ದೇಶನ. ಮತದಾರರು ತಮಗೆ ನಿಧ್ರಿಷ್ಟಪಡಿಸಿದ ಮತದಾನ ಕೇಂದ್ರಕ್ಕೆ ತೆರಳಿ ನಿರ್ಭಯವಾಗಿ ಮತದಾನ ಮಾಡಬೇಕು. ಯಾವುದೇ ಕಾರಣಕ್ಕೂ ಯಾವುದೇ ಆಮಿಷಗಳಿಗೆ ಬಲಿಯಾಗದೇ ಮತ ಚಲಾಯಿಸಬೇಕು ಎಂದರು.

ಸಹಾಯಕ ಕಾರ್ಯಪಾಲಕ ಅಭಿಯಂತರ ಕೆ.ವಿನಯ್, ಸಹಾಯಕ ಇಂಜಿನಿಯರ್ ಲೋಕೇಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಸುನೀಲ್, ಗೀತಾಕುಮಾರ್, ಭಾಸ್ಕರ, ಗುರುಪ್ರಸಾಧ್, ರುದ್ರಮುನಿ, ವೆಂಕಟೇಶ್, ಎಸ್.ಎಲ್.ಮಂಜಣ್ಣ, ಚೇತನ್, ವೀರಭದ್ರಿ, ಕಲಾತಂಡ ರುದ್ರಮುನಿ, ಸುವರ್ಣಮ್ಮ, ಹಂಪಣ್ಣ, ಕರಿಬಸಮ್ಮ, ನಾಗರಾಜು, ಮಲ್ಲೇಶಪ್ಪ ಮುಂತಾದವರು ಉಪಸ್ಥಿತರಿದ್ದರು.

## ಅಗತ್ಯ ಸೇವೆಗಳ 99 ಮತದಾರರಿಂದ ಮತ ಚಲಾವಣೆ





» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಕರ್ತವ್ಯ ನಿಮಿತ್ಯ ಮತದಾನ ದಿನದಂದು ಗೈರು ಹಾಜರಿ ಹಾಗೂ ಅಗತ್ಯ ಸೇವೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಪೋಸ್ಟಲ್ ವೋಟಿಂಗ್ ಸೆಂಟರ್‌ನಲ್ಲಿ ಮತ ಚಲಾಯಿಸಲು ಅವಕಾಶಕಲ್ಪಿಸಿದ್ದು,ಮೊದಲ ದಿನವಾದ ಶುಕ್ರವಾರ ಜಿಲ್ಲೆಯ 99 ಅಗತ್ಯ ಸೇವಾ ಮತದಾರರು ಮತ ಚಲಾಯಿಸಿದ್ದಾರೆ. ಅಗತ್ಯ ಸೇವೆಯಲ್ಲಿ ಕರ್ತವ್ಯ ನಿರತರಾಗಿರುವ ವಿವಿಧ ಕ್ಷೇತ್ರಗಳ ಸಿಬ್ಬಂದಿಗಳು ಮತದಾನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಚುನಾವಣಾ ಆಯೋಗವು ಮತದಾನ ಮಾಡಲು ವಿಶೇಷ ಕಲ್ಪಿಸಿದ್ದು, ಮೊದಲ ದಿನ ಶುಕ್ರವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೆಎಸ್‌ಆರ್‌ಟಿಸಿ, ಪೊಲೀಸ್ ಇಲಾಖೆ, ಆಕಾಶವಾಣಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಪತ್ರಕರ್ತರು ಸೇರಿದಂತೆ ಅಗತ್ಯ ಸೇವೆಗಳ ಕ್ಷೇತ್ರದ 99 ಮತದಾರರು ಮತ ಚಲಾಯಿಸಿದರು.

ಚಿತ್ರದುರ್ಗ ನಗರದ ತಹಶೀಲ್ದಾರ್ ಕಚೇರಿಯಲ್ಲಿರುವ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾ ಅಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ಅಂಚೆ ಮತದಾನ ಕೇಂದ್ರಕ್ಕೆ (ಪೋಸ್ಟಲ್ ವೋಟಿಂಗ್ ಸೆಂಟರ್) ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಸಂಬಂಧ ಕರ್ತವ್ಯ ನಿರತ ಗೈರು ಹಾಜರಿ ಮತದಾರರು ಆಗಮಿಸಿ ತಮ್ಮ ಮತ ಚಲಾಯಿಸಬಹುದು. ಅಗತ್ಯ ಸೇವೆಗಳ ನೌಕರರು ಮತ ಚಲಾಯಿಸಲು ಏಪ್ರಿಲ್ 21 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ.

## ಪ್ರಮುಖ ಸುದ್ದಿ

### ಯುವ ಉದ್ಯಮಿ ಸದ್ಗುರು ಪ್ರದೀಪ್ ರವರಿಂದ ಮತಯಾಚನೆ.

# ಸದೃಢ ರಾಷ್ಟ್ರ ಶಕ್ತಿಶಾಲಿಯಾಗಲು ಬಿಜೆಪಿ ಬೆಂಬಲಿಸಿ

» ಹೊಸದುರ್ಗ



ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರು ಕಳೆದ ಹತ್ತು ವರ್ಷಗಳಿಂದ ಭಾರತವನ್ನು ಸದೃಢ ದೇಶವಾಗಿ ಬೆಳೆಸಿದ್ದಾರೆ. ಸಶಕ್ತ ಭಾರತ ದೇಶ ಶಕ್ತಿಶಾಲಿ ರಾಷ್ಟ್ರವಾಗಿ ರೂಪುಗೊಳ್ಳಲು ಮತ್ತೊಮ್ಮೆ ಬಿಜೆಪಿಯನ್ನು ಬೆಂಬಲಿಸಬೇಕೆಂದು ಬಿಜೆಪಿ ಮುಖಂಡ ಯುವ ಉದ್ಯಮಿ ಸದ್ಗುರು ಪ್ರದೀಪ್ ತಿಳಿಸಿದರು.

ತಾಲೂಕಿನ ಕಸಬಾ ಹೋಬಳಿಯ ಹುಣುವಿನಡು ಪಂಚಾಯತಿ ಸೊಡರನಾಳು ಗ್ರಾಮದಲ್ಲಿ ಮತಯಾಚನೆ ಮಾಡಿ ಮಾತನಾಡಿದ ಅವರು ಚಹಾ ಮಾರುತ್ತಿದ್ದ ಕೂಲಿ ಕಾರ್ಮಿಕನ ಮಗನೊಬ್ಬ ಇಂದು 140 ಕೋಟಿ ಜನಸಂಖ್ಯೆ ಇರುವ ಬೃಹತ್ ಭಾರತವನ್ನು ಆಳುತ್ತಿದ್ದು ಈ ದೇಶದ ಸಾರ್ವಭೌಮತ್ವವನ್ನ ಜಗತ್ತಿಗೆ ಸಾರಿದ್ದಾರೆ. ಭಾರತೀಯರಾದ ನಾವುಗಳು ಸ್ವಾಭಿಮಾನದಿಂದ ಬದುಕಬೇಕಾದರೆ ಮತ್ತೊಮ್ಮೆ ನರೇಂದ್ರ ಮೋದಿ ಅವರನ್ನು ನಾವು ನೀವೆಲ್ಲರೂ ಬೆಂಬಲಿಸಬೇಕು. ಚೈನಾ ಪಾಕಿಸ್ತಾನದಂತಹ ಶತ್ರು ರಾಷ್ಟ್ರಗಳು ಇಂದು ನರೇಂದ್ರ ಮೋದಿ ಅವರನ್ನು ಸೋಲಿಸಲು ಬಿಜೆಪಿಯನ್ನು ಮಣಿಸಲು ಅವರೇ ಸಾಪಿಸಿರುವ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ವಾಮ ಮಾರ್ಗದಲ್ಲಿ ಮೋದಿಯವರ ಬಗ್ಗೆ ಇಲ್ಲದ ಸಲ್ಲದ ಆರೋಪಗಳನ್ನ ಮಾಡುತ್ತಿದ್ದಾರೆ.

ಭಾರತದಲ್ಲಿ ಪ್ರಜೆಗಳಾದ ಈ ದೇಶದ ಸಾಮಾನ್ಯನಾಗರಿಕನುಸಹಪ್ರಧಾನಿನರೇಂದ್ರ ಮೋದಿಯವರ ಪಾರದರ್ಶಕವಾದ ಆಡಳಿತವನ್ನು ಒಪ್ಪಿದ್ದಾನೆ.ಪ್ರಧಾನಿ ನರೇಂದ್ರ ಮೋದಿಯವರನ್ನ ಮೂರನೇ ಬಾರಿಗೆ ಅಧಿಕಾರಕ್ಕೆ ತರಲು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮತದಾರ ಪ್ರಭುಗಳು ಈ ಬಾರಿ ಬಿಜೆಪಿಗೆ ಮತ ಹಾಕುವುದರ ಮೂಲಕ ಸಜ್ಜನ ವ್ಯಕ್ತಿತ್ವದ ಕ್ರಿಯಾಶೀಲ ಅನುಭವಿ ರಾಜಕಾರಣಿ ಗೋವಿಂದ ಕಾರಜೋಳ ರವರಿಗೆ ಮತ ಹಾಕಿ ಗೆಲ್ಲಿಸಬೇಕು ಎಂದರು. ಬಿಜೆಪಿ ಜಿಲ್ಲಾ ಎಸ್ ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕಡವಗೆರೆ ದೇವರಾಜ್ ಮಾತನಾಡಿ ಬಿಜೆಪಿ ವಿಶ್ವದಲ್ಲಿಯೇ ಸಂಘಟನಾತ್ಮಕವಾಗಿ ಅತ್ಯಂತ ಶಕ್ತಿಶಾಲಿ ಪಕ್ಷವಾಗಿ ಹೊರಹೊಮ್ಮಿದೆ. ಮೋದಿಯವರ ಹೆಸರಿನ ಜೊತೆಗೆ ನಮ್ಮ ಬಿಜೆಪಿಯ ಕಾರ್ಯಕರ್ತರು ಪ್ರತಿ ಬೂತ್ ನಲ್ಲಿ ಚುನಾವಣಾ ದಿನ ಜಾಗರೂಕತೆಯಿಂದ ಕೆಲಸ ಮಾಡಿದಾಗ ನಮ್ಮ ನಮ್ಮ ಬೂತ್ ಗಳನ್ನು ಗೆಲ್ಲಲು ಸಾಧ್ಯ, ನಂತರ ನಮ್ಮ ಅಭ್ಯರ್ಥಿ ಗೆಲುವು ಸಾಧಿಸುವುದರಲ್ಲಿ ಯಶಸ್ವಿಯಾಗುತ್ತೇವೆ ಎಂದರು.

ಮತದಾನಅಭಿಯಾನಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರಾದ. ಗೂಳಿಹಟ್ಟಿ ಕೃಷ್ಣಮೂರ್ತಿ ಬೋಕಿಕೆರೆ ನಾಗರಾಜ್, ಮಂಜುನಾಥ್ ಸೊಡರನಾಳು , ಅಶೋಕ್ ಅಶೋಕ್, ಮಾರುತಿ ಹೊನ್ನೇನಹಳ್ಳಿ. ಕುಮಾರಪ್ಪ ರಾಮಲಿಂಗಪ್ಪ , ಶಂಕ್ರಪ್ಪ ಶೇಖರಪ್ಪ, ಶಿವಪ್ಪ, ಮಂಜುನಾಥ್ ,ಶ್ರೀನಿವಾಸ್, ,ಅನಿವಾಳ,ಮಾಡದಕೆರೆ ಈಶ್ವರಪ್ಪ, ದೇವಿಗೆರೆ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಮಾವಿನಕಟ್ಟೆ ರಾಜಪ್ಪ, ಸೇರಿದಂತೆ ಅಪಾರ ಸಂಖ್ಯೆಯ ಬಿಜೆಪಿ ಕಾರ್ಯಕರ್ತರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಪಂಜಿನ ಮೆರವಣಿಗೆ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜಾಥ ಕಾರ್ಯಕ್ರಮ



» **ಹೊಸದುರ್ಗ**

ತಾಲೂಕಿನ ಶ್ರೀರಾಂಪುರ ಗ್ರಾಮದಲ್ಲಿ ಸ್ಥಳೀಯ ಗ್ರಾಪಂ ಅಯೋಜಸಿದ್ದ ನಮ್ಮ ನಡೆ ಮತದಾನದ ಕಡೆ ಎಂಬ ಘೋಷಣೆಯೊಂದಿಗೆ ಪ್ರತಿಯೊಬ್ಬರು ಮತದಾನ ಮಾಡುವ ಮೂಲಕ ನಮ್ಮ ಹಕ್ಕುನ್ನು ಚಲಾಯಿಸಬೇಕು ಎಂದು ಗ್ರಾಮ ಪಂಚಾಯಿತಿ ಪಿಡಿಓಗಳು ಸಿಬ್ಬಂದಿಗಳು ಅಂಗನವಾಡಿ ಅಶಾ ಕಾರ್ಯಕರ್ತೆಯರು ಪಂಜಿನ ಮೆರವಣಿಗೆ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜಾಥ ನೆಡಸಿದರು. ಶ್ರೀರಾಂಪುರ ಪಟ್ಟಣದ ಮುಖ್ಯ ರಸ್ತೆಯ ಗೋಪಾಲ ಕೃಷ್ಣ ವೃತ್ತದಲ್ಲಿ ಮಾನವ ಸರಪಳಿ ಮಾಡಿ ವೃತ್ತದಲ್ಲಿದ್ದ ಸಾರ್ವಜನಿಕರಿಗೆ ಮತದಾನದ ಮಹತ್ವ ಕುರಿತು ಪ್ರತಿಜ್ಞಾವಿಧಿ ಬೋದಿಸಲಾಯಿತು.ಮತದಾನ ಹಕ್ಕು ಪಡೆದ ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡುವುದರಿಂದ ನಮ್ಮ ಭಾರತದ ಪ್ರಜಾಪ್ರಭುತ್ವ ಅಡಳಿತ ವ್ಯವಸ್ಥೆ ವಿಶ್ವದಲ್ಲಿಯೆ ಮಾದರಿಯಾಗುತ್ತದೆ ಎಂದು ಪಿಡಿಓ ಪಾಲಾಕ್ಷಪ್ಪ ಹೇಳಿದರು. ಕಾರ್ಯಕ್ತಮದಲ್ಲಿ ಪಿಡಿಓಗಳಾದ ವಿಶ್ವನಾಥ್, ವಸಂತಕುಮಾರ್ ಹಾಗೂ ಪಂಚಾಯಿತಿ ಸಿಬ್ಬಂದಿಗಳು ಭಾಗವಹಿಸಿದ್ದರು.

### ಯುವ ಮತದಾರರ ಜಾಗೃತಿಗಾಗಿ ವಾಲಿಬಾಲ್ ಪಂದ್ಯಾವಳಿ



» **ಹೊಸದುರ್ಗ**

ಲೋಕಸಭೆ ಚುನಾವಣೆ-2024 ಮತದಾರರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ತಾಲ್ಲೂಕು ಆಡಳಿತ ತಾಲ್ಲೂಕು ಸ್ವೀಪ್ ಸಮಿತಿ, ಪುರಸಭೆ ಹಾಗೂ ಯೋಜನಾ ಕ್ರೀಡಾ ಇಲಾಖೆಯ ಸಹಯೋಗದೊಂದಿಗೆ 18 ವರ್ಷ ಮೇಲ್ಪಟ್ಟ ಯುವ ಮತದಾರರಲ್ಲಿ ಜಾಗೃತಿ ಮೂಡಿಸಲು ಪಟ್ಟಣದ ಕ್ರೀಡಾಂಗಣದಲ್ಲಿ ವಾಲಿಬಾಲ್ ಪಂದ್ಯಾವಳಿಯನ್ನ ಆಯೋಜಿಸಲಾಗಿತ್ತು.ಕಾರ್ಯಕ್ರಮದಲ್ಲಿ ಸಹಾಯಕ ಚುನಾವಣಾಧಿಕಾರಿ ಹೊಸದುರ್ಗ ಸೆಗ್‌ಮೆಂಟ್ ಅಧಿಕಾರಿಯಾದ ಮಹೇಂದ್ರಕುಮಾರ್.ಎಂ ರವರು ಖುದ್ದು ವಾಲಿಬಾಲ್ ಥ್ರೋ ಮಾಡುವ ಮೂಲಕ ಚಾಲನೆ ನೀಡಿ ಯುವ ಮತದಾರರು ಯಾವುದೇ ಹಣ ಅಥವಾ ಆಮಿಷಗಳಿಗೆ ಒಳಗಾಗದೇ ನಿರ್ಭೀತಿಯಿಂದ ಸುಭದ್ರ ಸರ್ಕಾರ ರಚಿಸಲು ಯೋಗ್ಯವಾದ ವ್ಯಕ್ತಿಯನ್ನು ಚುನಾಯಿಸಲು ಮತಗಟ್ಟೆಗೆ ಬಂದು ಮತದಾನ ಮಾಡಲು ಕರೆ ನೀಡಿದರು.ಮತದಾನ ಜಾಗೃತಿ ಅಭಿಯಾನದಡಿ ಚುನಾವಣೆ ಆಯೋಗದ ಮಾರ್ಗಸೂಚಿಯಂತೆ ಹಲವು ಕಾರ್ಯಕ್ರಮಗಳಾದ ಜಾಗೃತಿ ಜಾಥ, ಬೀದಿ ನಾಟಕಗಳು, ಸಹಿಸಂಗ್ರಹ ಅಭಿಯಾನ, ಸೆಲ್ಪಿ ಪಾಯಿಂಟ್, ಮತ್ತು ಬೈಕ್ ರ್ಯಾಲಿಗಳನ್ನು ಹಮ್ಮಿಕೊಳ್ಳಲಾಗಿದ್ದು ಎಲ್ಲಾ ಮತದಾರರು ಅರಿವು ಮೂಡಿಸಲಾಗಿದ್ದು ನನ್ನ ಮತ ನನ್ನ ಹಕ್ಕು ಎಂಬ ಘೋಷವಾಕ್ಯದಡಿ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಡಿಮೆ ಮತದಾನ ಆಗಿರುವ ಸ್ಥಳಗಳಲ್ಲಿ ಹೆಚ್ಚಿನದಾಗಿ ಜಾಗೃತಿ ಮೂಡಿಸಲಾಗುತ್ತಿರುವ ಬಗ್ಗೆ ತಿರುಪತಿಪಾಟೀಲ್ ತಹಶೀಲ್ದಾರ್ ರವರು ಮಾಹಿತಿ ನೀಡಿದ್ದರು,

ಈ ಸಂದರ್ಭದಲ್ಲಿ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಜಿ.ವಿ. ತಿಮ್ಮರಾಜು, ಯುವಜನ ಕ್ರೀಡಾ ಇಲಾಖೆ ಅಧಿಕಾರಿ ಮಹಂತೇಶ್, ಅರೋಗ್ಯ ನಿರೀಕ್ಷಕ ಬಸವರಾಜು, ಕಂದಾಯಾಧಿಕಾರಿ ಯೋಗೇಶ್, ಹಾಜರಿದ್ದರು.


### ನಾಟಕ ಪ್ರದರ್ಶನ

» **ಶಿವಮೊಗ್ಗ**

ಅಂಚೆ ಇಲಾಖೆ ವತಿಯಿಂದ ಏ.23 ರಂದು ನಗರದ ನೆಹರು ಕ್ರೀಡಾಂಗಣ, ಸಿಟಿ ಸೆಂಟರ್ ಮಾಲ್, ರಾಮಣ್ಣ ಶ್ರೇಷ್ಠಿ ಪಾರ್ಕ್ ಹಾಗೂ ಗೋಪಿ ವೃತ್ತದ ಪ್ರದಾನ ಅಂಚೆ ಕಚೇರಿ ಆವರಣದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ -2024ರ ಅಂಗವಾಗಿ ಮತದಾರರಲ್ಲಿ ಮತದಾನದ ಜಾಗೃತಿ ಮೂಡಿಸಲು ಅಂಚೆ ಇಲಾಖೆಯ ಸಿಬ್ಬಂದಿಯವರು ಬೀದಿ ನಾಟಕವನ್ನು ಪ್ರದರ್ಶಿಸಲಿದ್ದಾರೆ ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ರಾಜ್ಯದಲ್ಲಿ ಮಳೆ ಇಲ್ಲದೆ ಬರ: ಅಭಿವೃದ್ದಿಗೂ ಬರ

**11 ತಿಂಗಳ ಆಡಳಿತದಲ್ಲಿ 1.55ದಶಲಕ್ಷ ಕೋಟಿ ಸಾಲ : ಗ್ಯಾರಂಟಿ ಗಿಮಿಕ್ ಮೂಲಕ ಗೆಲಲ್ಲು ಹೊರಟ ಕಾಂಗ್ರೆಸ್‌ಗೆ ಬುದ್ದಿ ಕಲಿಸಿ : ಎಚ್ಡಿಕೆ.**





» **ಚಳ್ಳಕೆರೆ**

ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ದೊಡ್ಡಪ್ರಮಾಣಸಾಲಹೊತ್ತಸರ್ಕಾರವನ್ನು ನಾನು ಎಂದೂ ನೋಡಿಲ್ಲ. ಅಧಿಕಾರಕ್ಕೆ ಬಂದು ಕೇವಲ ಹನ್ನೊಂದು ತಿಂಗಳ ಅವಧಿಯಲ್ಲೇ 1.55 ದಶಲಕ್ಷಕೋಟಿ ಸಾಲವನ್ನು ರಾಜ್ಯ ಸರ್ಕಾರ ಮಾಡಿದೆ. ರಾಜ್ಯದ ಯಾವುದೇ ಭಾಗದಲ್ಲೂ ಅಭಿವೃದ್ಧಿ ಇಲ್ಲ. ರೈತರು, ಕಾರ್ಮಿಕರು. ಎಸ್ಸಿ, ಎಸ್ಸಿ, ಹಿಂದುಳಿದ ವರ್ಗ, ಎಲ್ಲಾ ವರ್ಗದ ಜನರು ಸರ್ಕಾರದ ಆಡಳಿತದಿಂದ ರೋಸಿದ್ದಾರೆ. ರಾಜ್ಯದಲ್ಲಿ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿಯವರ ಶಕ್ತಿ ಬಲಪಡಿಸಲು ಬಿಜೆಪಿ-ಜೆಡಿಎಸ್ ಮೈತ್ರಿ ಅಸ್ತಿತ್ವಕ್ಕೆ ಬಂದಿದ್ದು, ನಿರೀಕ್ಷೆಗೂ ಮೀರಿ ಯಶಸ್ಸನ್ನು ಈ ರಾಜ್ಯದ ಮತದಾರರು ನೀಡಲಿದ್ದಾರೆಂದು ರಾಜ್ಯದ ಮಾಜಿ ಮುಖ್ಯಮಂತ್ರಿ, ಜೆಡಿಎಸ್ ವರಿಷ್ಠ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಅವರು, ಶುಕ್ರವಾರ ಪರಶುರಾಮಪುರದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಏರ್ಪಡಿಸಿದ್ದ ಚುನಾವಣಾ ಪ್ರಚಾರ ಸಭೆಯನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸರ್ಕಾರ ಮಹಿಳೆಯರಿಗೆ ನೀಡಿದ ಗ್ಯಾರಂಟಿಗಳ ಬಗ್ಗೆ ಬಾರಿ ಪ್ರಚಾರ ನಡೆಸುತ್ತಾರೆ. ಆದರೆ, ಇವುಗಳಿಂದ ರಾಜ್ಯದ ಅಭಿವೃದ್ಧಿ ಶೂನ್ಯವಾಗಿದೆ. ಗ್ಯಾರಂಟಿ ಜಾರಿಯಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾಣಲು ಸಾಧ್ಯವಾಗಿಲ್ಲ. ಗೃಹಲಕ್ಷ್ಮಿ ಯೋಜನೆಯಲ್ಲಿ ತಿಂಗಳಿಗೆ ಎರಡು ಸಾವಿರಕೊಟ್ಟು, ಆ ಹಣವನ್ನು ಬೇರೆ ರೂಪದಲ್ಲಿ ಜನರಿಂದ ಕಸಿಯಲಾಗುತ್ತಿದೆ. ಕೆಎಸ್‌ಆರ್‌ಟಿಸಿ, ಬೆಸ್ಕಾಂಗೆ ಸಾವಿರಾರು ಕೋಟಿ ಸಾಲವನ್ನು ನೀಡಬೇಕಿದೆ. ಉಚಿತ ಯೋಜನೆಯಿಂದ ಕೆಎಸ್‌ಆರ್‌ಟಿಸಿ, ಬೆಸ್ಕಾಂ ಎರಡೂ ನಷ್ಟದಲ್ಲಿ ನಡೆಯುತ್ತಿವೆ. ಸರ್ಕಾರಿ ನೌಕರರಿಗೆ ಸಂಬಳಕೊಡುವ ಸ್ಥಿತಿಯಲ್ಲೂ ಸರ್ಕಾರವಿಲ್ಲ ಎಂದರು.

ಈ ಹಿಂದೆ ನಾನು ರಾಜ್ಯದ ಮುಖ್ಯಮಂತ್ರಿಯಾದಾಗ ರೈತ ಸಾಲಮನ್ನಾ ಮಾಡಿದ್ದೆ, ರೈತ ಜಮೀನಿಗೆ ಪಂಪ್‌ಸೆಟ್ ಸೌಲಭ್ಯ ಪಡೆಯಲು ಕೇವಲ 5 ಸಾವಿರ ಪಾವತಿಸಬೇಕಿದ್ದು, ಪ್ರಸ್ತುತ ಸರ್ಕಾರ ಅದನ್ನು 2.50 ಲಕ್ಷಕ್ಕೆ ಏರಿಸಿದೆ. ವಿಶೇಷವಾಗಿ ರೈತರಿಗೆ ಅನುಕೂಲವಿರುವ ಟ್ರಾನ್ಸ್‌ಫಾರ್ಮ್‌ಗಳು ಎಲ್ಲೂ ಸಹ ರೈತರಿಗೆ ಲಭ್ಯವಿಲ್ಲ. ರೈತರ ಬದುಕನ್ನು ದುಸ್ಥರಗೊಳಿಸಿದ್ದೇ ಈ ಸರ್ಕಾರದ ಸಾಧನೆ. ಚಿತ್ರದುರ್ಗ ಜಿಲ್ಲೆಗೆ ಕೇಂದ್ರ ಸರ್ಕಾರ ಫಸಲ್‌ಭೀಮಾ ಯೋಜನೆ ಮೂಲಕ ರೈತರಿಗೆ 284 ಕೋಟಿ ಪರಿಹಾರ ಕೇಂದ್ರ ಸರ್ಕಾರ ನೀಡಿದೆ. ಅದೇ ರೀತಿ ಕಿಸಾನ್‌ಸಮ್ಮಾನ್ ಯೋಜನೆಯಲ್ಲಿ ಕೇಂದ್ರ ಸರ್ಕಾರ ರೈತರಿಗೆ ನೆರವಾಗಿದೆ. ವಿಶೇಷವಾಗಿ ಚಿತ್ರದುರ್ಗ ಜಿಲ್ಲೆಗೆ ಸಮಗ್ರ ನೀರಾವರಿ ಸೌಲಭ್ಯ ಕಲ್ಪಿಸಲು ಭದ್ರಾಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ವ್ಯಾಪ್ತಿಗೆ ಸೇರ್ಪಡೆ ಮಾಡಿ ಅವಶ್ಯವಿರುವ ಹಣವನ್ನು ಕೇಂದ್ರ ಸರ್ಕಾರ ಮೀಸಲಿಟ್ಟಿದೆ. ರಾಜ್ಯದ ಮತದಾರ ಈಗಾಗಲೇಮೈತ್ರಿಕೂಟವನ್ನುಬೆಂಬಲಿಸಲು ತೀರ್ಮಾನ ತೆಗೆದುಕೊಂಡಿದ್ದಾನೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲೂ ಸಹ ಸಾಕಷ್ಟು ಅನುಭವಿ ಹಿರಿಯ ರಾಜಕಾರಣಿ, ದಲಿತ ಸಮೂಹದ ಮಹಾನ್ ನಾಯಕ ಗೋವಿಂದ ಕಾರಜೋಳ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ಅವರ ಗೆಲುವಿಗೆ ನೀವೆಲ್ಲರೂ ಸಹಕರಿಸಬೇಕು ಎಂದರು.

ಅಭ್ಯರ್ಥಿ ಗೋವಿಂದಕಾರಜೋಳ ಮಾತನಾಡಿ,ರಾಜ್ಯದಮಾಜಿಮುಖ್ಯಮಂತ್ರಿ, ಸ್ನೇಹಜೀವಿ, ನೇರ ನಡೆ, ನುಡಿ ಉಳ್ಳವರಾದ ಎಚ್.ಡಿ.ಕುಮಾರಸ್ವಾಮಿ, ಚುನಾವಣಾ ಪ್ರಚಾರಕ್ಕೆ ಆಗಮಿಸಿ ಕಾರ್ಯಕರ್ತರಿಗೆ ಮುಖಂಡರಿಗೆ ಮಾರ್ಗದರ್ಶನ ಮಾಡಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರ ಹಿಂದುಳಿದ ಕ್ಷೇತ್ರವಾಗಿದ್ದು, ಇದರ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತೇನೆ. ಭಗವಂತನ ಕೃಪೆ, ಹಿರಿಯರ ಆಶೀರ್ವಾದಿಂದ ಕ್ಷೇತ್ರದಲ್ಲಿ ಎಲ್ಲೂ ಹೋದರೂ ನನಗೆ ಉತ್ತಮ ಜನಬೆಂಬಲ ವ್ಯಕ್ತವಾಗುತ್ತಿದೆ. ಇದನ್ನು ಸಹಿಸದ ಕಾಂಗ್ರೆಸ್‌ನವರು ಅಪಪ್ರಚಾರದಲ್ಲಿ ತೊಡಗಿದ್ದಾರೆ. ನನಗೆ ಈ ಕ್ಷೇತ್ರದ ಮತದಾರರ ಮೇಲೆ ಅಚಲವಾದ ನಂಬಿಕೆ ಇದೆ. ಮತದಾರರು ಮೋದಿ ಆಡಳಿತಕ್ಕೆ ಜೈಕಾರ ಹಾಕುವರು. ನಿಮ್ಮೆಲ್ಲರ ವಿಶ್ವಾಸದಿಂದ ನನ್ನ ಗೆಲುವು ಸಾಧ್ಯವೆಂದರು.

ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ, ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್‌ಯಾದವ್, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಣ್ಣ, ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಯುವ ಮುಖಂಡ ಎಂ.ರವೀಶ್, ಕೆ.ಟಿ.ಕುಮಾರಸ್ವಾಮಿ, ಅನಿಲ್‌ಕುಮಾರ್, ಎಚ್.ಆನಂದಪ್ಪ, ಚನ್ನಿಗರಾಯ, ಸೋಮಶೇಖಮಂಡಿಮಠ, ಬಿ.ಎಸ್.ಶಿವಪುತ್ರಪ್ಪ, ಮಂಡಲಾಧ್ಯಕ್ಷ ಸೂರನಹಳ್ಳಿಶ್ರೀನಿವಾಸ್, ಜಯಪಾಲಯ್ಯ, ನಗರಸಭಾ ಸದಸ್ಯರಾದ ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್ ಭಾಗವಹಿಸಿದ್ದರು.

## ಚುನಾವಣಾ ಕಾರ್ಯಗಳ ಬಗ್ಗೆ ಸೆಕ್ಟರ್ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ: ಬಿ.ಆನಂದ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸೆಕ್ಟರ್ ಅಧಿಕಾರಿಗಳ ಸಭೆಯನ್ನು ಇಲ್ಲಿನ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಚುನಾವಣಾ ಶಾಖೆಯಲ್ಲಿ ನಡೆಸಲಾಯಿತು.




ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ಅಧಿಕಾರಿಗಳಿಗೆ ಸೂಚನೆ ನೀಡಿ, ಮತದಾನ ಪ್ರಕ್ರಿಯೆ ಆರಂಭವಾಗಲು ಇನ್ನೂ ಕೇವಲ ಏಳು ದಿನಗಳು ಮಾತ್ರ ಬಾಕಿ ಇವೆ. ಚಳ್ಳಕೆರೆವಿಧಾನಸಭಾಕ್ಷೇತ್ರವ್ಯಾಪ್ತಿಯ 260 ಮತಗಟ್ಟೆ ಅಧಿಕಾರಿಗಳಿಗೆ ಈಗಾಗಲೇ ಮೂರು ಹಂತದಲ್ಲಿ ತರಬೇತಿಯನ್ನು ನೀಡಲಾಗಿದೆ. ಸೆಕ್ಟರ್ ಅಧಿಕಾರಿಗಳಿಗೂ ಹಲವಾರು ಬಾರಿ ಸಭೆ ನಡೆಸಿ ಮಾರ್ಗದರ್ಶನ ನೀಡಲಾಗಿದೆ. ಚುನಾವಣಾ ಕಾರ್ಯದಲ್ಲಿ ಯಾವುದೇ ಲೋಪವಾಗದಂತೆ ಎಲ್ಲರೂ ಜಾಗೃತೆ ವಹಿಸಬೇಕು. ನಿಮ್ಮ, ನಿಮ್ಮ ವ್ಯಾಪ್ತಿಯ ಮತಗಟ್ಟೆ ಕೇಂದ್ರ, ಅಲ್ಲಿನ ವ್ಯವಸ್ಥೆ, ಮತದಾರರ ಪಟ್ಟಿ, ಮೂಲಭೂತ ವ್ಯವಸ್ಥೆ ಹಾಗೂ ಚುನಾವಣಾ ಕಾರ್ಯ ನಿರ್ವಹಿಸಲು ಅವಶ್ಯವಿರುವ ಎಲ್ಲಾ ದಾಖಲಾತಿಗಳನ್ನು ಮತಗಟ್ಟೆಗೆ ಹೋಗುವ ಮುನ್ನ ಒಮ್ಮೆ ಸೆಕ್ಟರ್ ಅಧಿಕಾರಿಗಳು ಪರಿಶೀಲನೆ ನಡೆಸಬೇಕು.

ಚುನಾವಣೆಯ ಮತದಾನ ಪ್ರಕ್ರಿಯೆ ಮುಗಿಯುವ ತನಕ ಸೆಕ್ಟರ್ ಅಧಿಕಾರಿಗಳಿಗೆ ವಿಶೇಷ ಜವಾಬ್ದಾರಿ ಇರುತ್ತದೆ. ಚುನಾವಣಾ ಸಾಮಾಗ್ರಿಗಳನ್ನು ಸಂಬಂಧಪಟ್ಟ ಮತಗಟ್ಟೆಕೇಂದ್ರಗಳು,ಅಧಿಕಾರಿಗಳು ಹಾಗೂ ನಿಯೋಜನೆಗೊಂಡ ಸಿಬ್ಬಂದಿ ವರ್ಗ ಸಮಯಕ್ಕೆ ಸರಿಯಾಗಿ ಆಗಮಿಸಿ ನಿಗದಿಪಡಿಸಿ ವಸ್ತುಗಳನ್ನು ತಮ್ಮೊಂದಿಗೆ ತೆಗೆದುಕೊಂಡು ಹೋಗಬೇಕಿದೆ. ಈ ಸಂದರ್ಭದಲ್ಲಿ ಸೆಕ್ಟರ್ ಅಧಿಕಾರಿಗಳು ಸ್ಥಳದಲ್ಲೇ ಹಾಜರಿದ್ದು ಅವರಿಗೆ ಮಾರ್ಗದರ್ಶನ ನೀಡಬೇಕು ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ಬಿಇಒ ಕೆ.ಎಸ್.ಸುರೇಶ್, ಚುನಾವಣಾ ಶಿರಸ್ಥೇದಾರ್ ಹಸೀನಬೇಗಂ, ಶ್ರೀಧರ, ಓಬಳೇಶ್, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್,ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ಕೊಬ್ಬರಿ ಖರೀದಿಯಾಗದಿದ್ದಲ್ಲಿ ಚುನಾವಣೆ ಬಹಿಷ್ಕಾರ



» **ಹೊಸದುರ್ಗ**

ರೈತರಿಂದ ಎಲ್ಲಾ ಗಾತ್ರದ ಕೊಬ್ಬರಿ ಖರೀದಿಯಾಗಲೇಬೇಕು. ತಪ್ಪಿದಲ್ಲಿ ಲೋಕಸಭಾ ಚುನಾವಣೆಗೆ ಬಹಿಷ್ಕಾರ ಹಾಕಲಾಗುವುದು ಎಂದು ರೈತ ಸಂಘದ ತಾಲ್ಲೂಕು ಅಧ್ಯಕ್ಷ ಬೋರೇಶ್ ಶುಕ್ರವಾರ ಪತ್ರಿಕಾಗೋಷ್ಠಿ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನಲ್ಲಿ ತೆಂಗು ಪ್ರಮುಖ ಬೆಳೆಯಾಗಿದೆ. ಬರಗಾಲ, ನುಸಿ ರೋಗ, ಕಪ್ಪು ತಲೆ ಹುಳು ಬಾಧೆಯಂತಹ ಸಮಸ್ಯೆಗಳಿಂದ ತೆಂಗು ಬೆಳೆ ಕುಂಠಿತವಾಗಿದೆ. ಬೆಂಬಲ ಬೆಲೆ ಯೋಜನೆಯಡಿ ಕೊಬ್ಬರಿ ಖರೀದಿಸಲು ಸರ್ಕಾರ ಮುಂದಾಗಿದ್ದು, 75 ಎಂ.ಎಂ ಗಿಂತ ಕಡಿಮೆ ಗಾತ್ರದ ಕೊಬ್ಬರಿ ಖರೀದಿಸುತ್ತಿಲ್ಲ ಹೀಗಾದರೆ ಕೊಬ್ಬರಿ ಬೆಳೆಗಾರರ ಗತಿಯೇನು?. ಎಲ್ಲಾ ಗಾತ್ರದ ಕೊಬ್ಬರಿ ಖರೀದಿಯಾಗದಿದ್ದಲ್ಲಿ, ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ಮಾಡುವುದಾಗಿ ಅವರು ತಿಳಿಸಿದರು.ಜಿಲ್ಲಾ ಸಲಹಾ ಸಮಿತಿ ಸದಸ್ಯರು ತಾರೀಕೆರೆಕರಿಸಿದ್ದಯ್ಯ ಮಾತನಾಡಿ ಜನವರಿ ತಿಂಗಳಲ್ಲಿ ಕೊಬ್ಬರಿ ಖರೀದಿಸುವುದಾಗಿ ಆದೇಶ ಮಾಡಿದ್ದರು ಆದರೆ ಇದುವರೆಗೂ ಸಹಾ ಖರೀದಿಸಿಲ್ಲಾ,ರೈತ ಬೆಳೆದಿರುವ ಕೋಬ್ಬರಿಗೆ ಈಗ ಕ್ವಾಲಿಟಿ ಕೇಳುತಿದ್ದಾರೆ ಹಾಗೂ ಸಣ್ಣ ಕೊಬ್ಬರಿ ತಗೆದುಕೊಳ್ಳುವುದಿಲ್ಲ ಎಂದು ಹೇಳುತ್ತಿದ್ದಾರೆ.ಆದರೆ ಅವರು ವೇಸ್ಟ್ ಮತ್ತು ಕೌಟ್ ಇರಡನ್ನು ಸಹಾ ಬಿಟ್ಟು ಉಳಿದ ಕೊಬ್ಬರಿಯನ್ನ ಖರೀದಿಸಬೇಕು ಎಂದು ಆಗ್ರಹಿಸಿದರು.ಈ ಸಂಧರ್ಬದಲ್ಲಿ ಜಿಲ್ಲಾ ಉಪಾಧ್ಯಕ್ಷ ಮುರುಗೇಂದ್ರಪ್ಪ, ತಾಲೂಕು ಕಾರ್ಯದರ್ಶಿ ಕುಮಾರಸ್ವಾಮಿ, ಪ್ರಧಾನ ಕಾರ್ಯಧರ್ಶಿ ಶಶಿಧರ್,ತಾಲೂಕು ಗೌರವಾಧ್ಯಕ್ಷರಾದ ರಮೇಶ್ ಮತ್ತು ಚಿತ್ತಪ್ಪ, ಮಹೇಶ್ವರಪ್ಪ, ರೈತ ಮುಖಂಡ ಅಣ್ಣಪ್ಪ, ಹಾಗೂ ರೈತ ಮುಖಂಡರುಗಳು ಭಾಗವಹಿಸಿದ್ದರು.

## ಮತದಾನ ಜಾಗೃತಿ ಜಾಥಾ



**ಚಿತ್ರದುರ್ಗ:** ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಎಸ್‌ಜೆಎಂ ಕಲಾ ಮತ್ತು ವಾಣಿಜ್ಯ ಕಾಲೇಜು ಸಹಯೋಗದಲ್ಲಿ ಮತದಾನ ಜಾಗೃತಿ ಅಭಿಯಾನ ನಡೆಯಿತು. ಕಾಲೇಜಿನ ಸಭಾಂಗಣದಲ್ಲಿ ವಿದ್ಯಾರ್ಥಿಗಳಿಗೆ ಮತದಾನ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಜಿಲ್ಲಾ ಸ್ವೀಪ್ ಸಮಿತಿ ಸಂಚಾಲಕರಾದ ಸುಷ್ಮಾರಾಣಿ, ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಹೇಳಿದರು. ನಂತರ ಅವರು ಜಾಥಾಕ್ಕೆ ಚಾಲನೆ ನೀಡಿದರು.

**ಪ್ರಮುಖ ಸುದ್ದಿ**

**ಬಿಎಂ ಸರ್ಕಾರಿ ಪ್ರೌಢಶಾಲೆ : 1998ರ ಸಾಲಿನ ವಿದ್ಯಾರ್ಥಿಗಳಿಂದ ಗುರುವಂದನೆ**

# ತಮ್ಮ ಬದುಕನ್ನು ರೂಪಿಸಿದ ಗುರುಗಳಿಗೆ ಅಭಿನಂದನೆಗಳು

» **ಚಳ್ಳಕೆರೆ**

ನಗರದ ಬಿಎಂ ಸರ್ಕಾರಿ ಪ್ರೌಢಶಾಲೆಯ 1998ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಗುರುವಂದನಾ ಕಾರ್ಯಕ್ರಮವನ್ನು ನಗರದ ಹೊರವಲಯದ ಖಾಸಗಿ ರೇಸಾರ್ಟ್‌ನಲ್ಲಿ ಹಮ್ಮಿಕೊಂಡಿದ್ದರು.

ಕಳೆದ 25 ವರ್ಷಗಳ ಹಿಂದೆ ವಿದ್ಯಾರ್ಥಿಗಳಾಗಿ ಅಭ್ಯಾಸ ಮಾಡುವ ಸಂದರ್ಭದಲ್ಲಿ ನಮಗೆ ಮಾರ್ಗದರ್ಶನ ನೀಡಿ ನಮ್ಮೆಲ್ಲರ ಬದುಕಿಗೆ ಸ್ಪೂರ್ತಿ ನೀಡಿದ ಶಿಕ್ಷಕರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಮ ಸಹಾಯಕ ಮಂಜುನಾಥ, ನಾನು ಇದೇ ಶಾಲೆಯಲ್ಲಿ ಅಭ್ಯಾಸ ಮಾಡಿ ಇಂದು ಸರ್ಕಾರಿ ನೌಕರರನಾಗಿ ಕೆಲಸ ಮಾಡುತ್ತಿದ್ದೇನೆ. ನನಗೆ ವಿದ್ಯೆ ಕಲಿಸಿದ ಗುರುಗಳ ಸಮ್ಮುಖದಲ್ಲೇ ನಾನು ಇಂದು ಉತ್ತಮ ಬದುಕನ್ನು ನಡೆಸುವ



ಅವಕಾಶವನ್ನು ನನಗೆ ದೇವರು ಗುರುಗಳ ರೂಪದಲ್ಲಿ ಕರುಣಿಸಿದ್ದಾನೆಂದು ತಮ್ಮ ಸಂತಸವನ್ನುಹಂಚಿಕೊಂಡರು.ಶಾಲೆಯಲ್ಲಿ ಶಿಕ್ಷಕರಾಗಿ ಕಾರ್ಯನಿರ್ವಹಿಸಿದ ನಿವೃತ್ತ ಬಿಇಒ ರಾಮಯ್ಯ, ನಿವೃತ್ತ ಮುಖ್ಯ ಶಿಕ್ಷಕರಾದ ಬಿ.ರೇಣುಕಾ, ಯಲ್ಲಪ್ಪ, ಬಸವರಾಜಪ್ಪ, ಬಿ.ಎಂ.ಮಂಜುನಾಥ, ಕೆ.ತಿಪ್ಪೇಸ್ವಾಮಿಯವರನ್ನು ವಿದ್ಯಾರ್ಥಿಗಳ ವೃಂದ ಸಂತೋಷದಿಂದ ಸನ್ಮಾನಿಸಿ, ಅಭಿನಂದಿಸಿ ಗುರುಗಳಿಗೆ ವಂದನೆ ಸಲ್ಲಿಸಿದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನಿವೃತ್ತ ಬಿಇಒ ರಾಮಯ್ಯ, ನಾನು ಇದೇ ಶಾಲೆಯಲ್ಲಿ ಶಿಕ್ಷಕನಾಗಿ ಕಾರ್ಯನಿರ್ವಹಿಸಿದ ನಂತರ ಇದೇ ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದೇನೆ. ಅಂದಿನ ವಿದ್ಯಾರ್ಥಿಗಳಲ್ಲಿ ವಿಶ್ವಾಸ, ಶ್ರದ್ದೆಯ ಜೊತೆಗೆ ಅಪಾರವಾದ ಗೌರವವಿತ್ತು. ಪ್ರತಿಯೊಂದು ಹಂತದಲ್ಲೂ ಕಲಿಯಲು ಆಸಕ್ತಿ ತೋರುತ್ತಿದ್ದರು. ಯಾವುದೇ ರೀತಿಯ ಚಟಗಳಿಗೆ ಬಲಿಯಾಗುತ್ತಿರಲಿಲ್ಲ. ಶಿಕ್ಷಕರು ಹೇಳಿಕೊಟ್ಟ ಪಾಠವನ್ನು ಗಂಭೀರವಾಗಿ ಕೇಳಿ ಅಭ್ಯಾಸ ಮಾಡಿದ್ದಾರೆ. ನಿಮ್ಮಲ್ಲಿನ ಶ್ರದ್ದೆ, ವಿನಯ ನಿಮಗೆ ಇಂದು ಸಮಾಜದಲ್ಲಿ ಒಳ್ಳೆ ಸ್ಥಾನಮಾನವನ್ನು ನೀಡಿದೆ. ನಮಗೆ ನೀಡಿದ ಗೌರವಕ್ಕೆ ನಿಮಗೆಲ್ಲರಿಗೂ ಅಭಿನಂದನೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T